ಸಂಪುಟ : 8 ಸಂಚಿಕೆ : 253 ಪುಟ : 4 ಬೆಲೆ : 3.00 ಗುರುವಾರ ನವ್ಹಂಬರ್ 16, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 253 Pages : 4 Price : 3.00 Thursday November 16, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### ಜನತಾ ದರ್ಶನ ಕಾರ್ಯಕ್ರಮದಲ್ಲಿ ಅಧಿಕಾರಿಗಳಿಗೆ ಡಿಸಿ ಸೂಚನೆ

## ನವಗ್ರಾಮಗಳಿಗೆ ಮೂಲಭೂತ ಸೌಲಭ್ಯಕ್ಕಾಗಿ ಸ್ಥಳ ಪರಿಶೀಲಿಸಿ



**■ವಿಜಯಸಾಕ್ಷಿ ಸುದ್ದಿ, ನರಗುಂದ**

2009ರಲ್ಲಿ ಬೆಣ್ಣಿಹಳ್ಳದ ಪ್ರವಾಹದಲ್ಲಿ ಮುಳುಗಡೆಯಾದ ಸುರಕೋಡ ಹಾಗೂ ಕುರ್ಲಗೇರಿ ಗ್ರಾಮಗಳನ್ನು ಸಂಪೂರ್ಣ ಸ್ಥಳಾಂತರ ಮಾಡಿದ್ದರೂ 14 ವರ್ಷದಿಂದ ಮನೆ ಹಂಚಿಕೆ ಅಪೂರ್ಣ ಆಗಿವೆ. ಹೀಗಾಗಿ ನವಗ್ರಾಮದ ಜನತೆ ಮೂಲಭೂತ ಸೌಲಭ್ಯಗಳಿಂದ ವಂಚಿತಗೊಂಡಿವೆ ಎಂಬ ಜನರ ಆರೋಪಕ್ಕೆ ಜಿಲ್ಲಾಧಿಕಾರಿ ವೈಶಾಲಿ. ಎಮ್ ಎಲ್ ಅವರು ಸ್ಥಾನಿಕ ಪರಿಶೀಲನೆ ನಡೆಸಿ ಈ ಸಮಸ್ಯೆ ಬಗೆಹರಿಸುವಂತೆ ತಹಸೀಲ್ದಾರ ಹಾಗೂ ಪಿಡಿಓಗಳಿಗೆ ಸೂಚಿಸಿದರು.

ಬುಧವಾರ ತಾಲೂಕ ಪಂಚಾಯತಿ ಸಭಾಭವನದಲ್ಲಿ ತಾಲೂಕ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು,

ಸದ್ಯ ನಡೆದ ಜನತಾ ದರ್ಶನದಲ್ಲಿ ಕಂದಾಯ ಇಲಾಖೆ–05, ಭೂಮಾಪನಾ –05, ಸಮಾಜ ಕಲ್ಯಾಣ–01, ಲೋಕೋಪಯೋಗಿ–01, ಕೃಷಿ–02, ತಾಪಂ–11, ಸಿಡಿಪಿಓ–02 , ಪುರಸಭೆ–06, ಸರಕಾರಕ್ಕೆ ಪ್ರಸ್ತಾವನೆ ಸೇರಿದಂತೆ ಒಟ್ಟು 36 ಅರ್ಜಿಗಳು ಬಂದಿದ್ದು, ಎಲ್ಲ ಅರ್ಜಿಗಳ ಸಮಸ್ಯೆ ಪರಿಹಾರಕ್ಕೆ 15 ದಿನಗಳ ಕಾಲಾವಕಾಶ ನೀಡುವುದರ ಜೊತೆಗೆ ಇದಕ್ಕೊಂದು ತಂಡವನ್ನು ರಚಿಸಲಾಗಿದೆ ಎಂದರು.

ಸ್ಥಳಾಂತರಗೊಂಡ ಗ್ರಾಮಗಳಲ್ಲಿ ಮನೆಗಳು ಸಿಗದೇ ವಂಚಿತರಾದ ಕುಟುಂಬಗಳು ಜಿಲ್ಲಾಧಿಕಾರಿಗಳಲ್ಲಿ ತಮ್ಮ ನೋವನ್ನು ತೋಡಿಕೊಂಡು, ಮನೆ ಸಿಗದೇ ಹೋದಲ್ಲಿ ನಾವು ಎಲ್ಲಿ ಇರಬೇಕು, ನಮಗೆ ಆತ್ಮಹತ್ಯೆಯೇ ಗತಿ ಎಂದರು.

ಸಿದ್ದಾಪೂರ ಗ್ರಾಮಸ್ಥ ಪ್ರವೀಣ ಅಳಗವಾಡಿ ಮಾತನಾಡಿ, ನಮ್ಮ ಗ್ರಾಮದ ಇಕ್ಕಟ್ಟಾದ ರಸ್ತೆಯಲ್ಲಿ ಸಂಚಾರಕ್ಕೆ ಅಡಚಣೆಯಾದ ವಿದ್ಯುತ್ ಟಿಸಿ ಬೇರೆ ಕಡೆ ಸ್ಥಳಾಂತರಗೊಳಿಸಬೇಕು. ಕುಡಿಯುವ ನೀರಿನ ಕೆರೆಗೆ ತಂತಿ ಬೇಲಿ ಹಾಕಿಸಿಕೊಡಬೇಕು, ಗ್ರಾಮದಲ್ಲಿ ಹಾಕಲಾದ ಜೆಜೆಎಮ್ ಪೈಪಲೈನ್ ಮೂಲಕ ಕುಡಿಯುವ ನೀರು ಸರಿಯಾಗಿ ಬರುತ್ತಿಲ್ಲ ಎಂಬ ಆರೋಪಕ್ಕೆ ಈ ಸಮಸ್ಯೆಗಳನ್ನು ಕೂಡಲೇ ಪರಿಹರಿಸುವಂತೆ ಸಂಭಂದಿಸಿದ ಅಧಿಕಾರಿಗಳಿಗೆ ಡಿಸಿ ಸೂಚಿಸಿದರು.

ಬೆಣ್ಣಿಹಳ್ಳ ಮತ್ತು ವರ್ತಿಹಳ್ಳಗಳಲ್ಲಿನ ಕೆಲವು ಸ್ಥಳಗಳಲ್ಲಿ ಹೂಳು ತುಂಬಿದ್ದು ಇದರಿಂದ ಹಳ್ಳದ ನೀರು ಹೊಲಗಳಲ್ಲಿ ಪ್ರವೇಶ ಮಾಡಿ, ಹೊಲಗಳ ಫಲವತ್ತತೆಯನ್ನು ನಾಶಮಾಡುತ್ತಿದೆ. ಕೂಡಲೇ ಹೂಳೆತ್ತಿಸಬೇಕೆಂದು ರೈತರೊಬ್ಬರು ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಿಕೊಂಡರು.

ಚಿಕ್ಕನರಗುಂದ ಗ್ರಾಮದ ನಿವಾಸಿ ಗೂಳಪ್ಪ ಬಸಪ್ಪ ಕಡ್ಲಿಕೊಪ್ಪ 2021 ಮೇ 19 ರಂದು ಕೋವಿಡ್‌ನಿಂದ ಸಾವನ್ನಪ್ಪಿದ್ದಾರೆ. ಸರಕಾರಿ ಆಸ್ಪತ್ರೆ ಅವರು ಸರ್ಟಿಫಿಕೇಟ್ ನೀಡಿರುತ್ತಾರೆ. 3 ವರ್ಷ ಗತಿಸಿದರು ಇನ್ನೂ ಪರಿಹಾರ ಸಿಕ್ಕಿಲ್ಲವೆಂದು ಕುಟುಂಬಸ್ಥರು ಮಾಡಿದ ಮನವಿಗೆ ಟಿಹೆಚ್‌ಓ ಅವರನ್ನು ಕರೆದು ಪರಿಶೀಲನೆ ನಡೆಸಿ ಸಮಸ್ಯೆ ಬಗೆಹರಿಸಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ ಶ್ರೀಶೈಲ ತಳವಾರ, ತಾಪಂ ಇಓ ಎಸ್ ಕೆ ಇನಾಮದಾರ, ಸಿಪಿಐ ಮಂಜುನಾಥ ನಡುವಿನಮನಿ, ಆನಂದ ಬನಪ್ಪನವರ, ಎಸ್ ಎಲ್ ಪಾಟೀಲ, ತಾಲೂಕಿನ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಸಾರ್ವಜನಿಕರು ಇದ್ದರು.

## ಧನಸಹಾಯಕ್ಕೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ನಾಡಿನ ಕಲೆ, ಸಾಹಿತ್ಯ, ಸಂಗೀತ, ಜನಪದ, ನೃತ್ಯ, ನಾಟಕ ಸೇರಿದಂತೆ ಇತರೆ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 2023–24ನೇ ಸಾಲಿನ ಸಾಮಾನ್ಯ, ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ ನೋಂದಾಯಿತ ಸಾಂಸ್ಕೃತಿಕ ಸಂಘ ಸಂಸ್ಥೆಗಳ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಧನಸಹಾಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಗಳಿಗೆ ಧನಸಹಾಯ ನೀಡಲು ಸೇವಾಸಿಂಧು Sevasindhu.karnataka.gov.in ಮುಖಾಂತರ ಡಿಸೆಂಬರ್ 13ರವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಮಾರ್ಗಸೂಚಿಗಳನ್ನು ಸೇವಾಸಿಂಧು ಪೋರ್ಟಲ್ ಹಾಗೂ ಇಲಾಖೆಯ ವೆಬ್‌ಸೈಟ್: www.kannadasiri.karnataka.gov.in ನಲ್ಲಿ ಅಳವಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ 08022279954/ 9986837037/ 8792662814/ 8792662816/08022213530 ಅನ್ನು ಕಚೇರಿ ಅವಧಿಯಲ್ಲಿ ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

## ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೌಶಲ್ಯಾಭಿವೃದ್ಧಿ ಇಲಾಖಾ ವ್ಯಾಪ್ತಿಯ ಸಿಡಾಕ್ ಸಂಸ್ಥೆಯ ಮೂಲಕ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಉದ್ಯಮಶೀಲತೆಯ ಬಗ್ಗೆ 10 ದಿನಗಳ ಉಚಿತ ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಪ.ಜಾ/ ಪ.ಪಂ. ಅಭ್ಯರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆನ್‌ಲೈನ್ ಲಿಂಕ್: https://www.scsptsp.karnataka.gov.in/BMS/CDOC/EDPRegistrationForm.aspx ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿ ದೂರವಾಣಿ ಸಂಖ್ಯೆ 08372–231828 ಸಂಪರ್ಕಿಸಬಹುದಾಗಿದೆ.

### ತಾಣಗಳ ಸ್ವಚ್ಛತೆ, ಮೂಲಭೂತ ಸೌಲಭ್ಯ, ಸಂರಕ್ಷಣೆಗೆ ಅಗತ್ಯ ಕ್ರಮ– ಸಚಿವ ಎಚ್.ಕೆ. ಪಾಟೀಲ್

# ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರದ ಮಹತ್ವದ ಹೆಜ್ಜೆ

"ನಮ್ಮ ಸ್ಮಾರಕ ದರ್ಶನ ಮತ್ತು ಸಂರಕ್ಷಣೆಗಾಗಿ ಪ್ರವಾಸ" ಕಾರ್ಯಕ್ರಮ ಯಶಸ್ವಿ–ಸಚಿವರ ನೇತೃತ್ವದ ತಜ್ಞರು, ಇತಿಹಾಸಕಾರರ ತಂಡ ಸ್ಮಾರಕಗಳಿಗೆ ಭೇಟಿ, ಪರಿಶೀಲನೆ

ಕಲ್ಯಾಣ ಕರ್ನಾಟಕದ ಬೀದರ್, ಕಲಬುರಗಿ, ಯಾದಗಿರಿ ಜಿಲ್ಲೆಯ ಸ್ಮಾರಕಗಳ ದರ್ಶನ

ಸ್ಮಾರಕಗಳ ರಕ್ಷಣೆ ಹಾಗೂ ನಿರ್ವಹಣೆಗೆ ಸರ್ಕಾರದಿಂದ ಆಸಕ್ತ ಸಂಘ ಸಂಸ್ಥೆಗಳಿಗೆ ದತ್ತು

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯದಲ್ಲಿ "ನಮ್ಮ ಸ್ಮಾರಕ ದರ್ಶನ ಮತ್ತು ಸಂರಕ್ಷಣೆಗಾಗಿ ಪ್ರವಾಸ" ಕಾರ್ಯಕ್ರಮದ ಮೊದಲ ಹಂತದ ಕಾರ್ಯಕ್ರಮ ಯಶಸ್ವಿಯಾಗಿದ್ದು, ಪ್ರವಾಸದ ವೇಳೆ ಬಸವನಾಡು ಕಲ್ಯಾಣ ಕರ್ನಾಟಕದಲ್ಲಿ ವೀಕ್ಷಿಸಿದ ಸ್ಮಾರಕಗಳಲ್ಲಿ ಸ್ವಚ್ಛತೆ, ಮೂಲಭೂತ ಸೌಲಭ್ಯ, ಸಂರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್ ಹೇಳಿದ್ದಾರೆ.

ವಿಧಾನಸೌಧದ ಸಮ್ಮೇಳನಾ ಸಭಾಂಗಣದಲ್ಲಿ ಬುಧವಾರ ನಡೆಸಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, "ನಮ್ಮ ಸ್ಮಾರಕ ದರ್ಶನ ಮತ್ತು ಸಂರಕ್ಷಣೆಗಾಗಿ ಪ್ರವಾಸ" ಕಾರ್ಯಕ್ರಮದಡಿ, ಮೂರು ದಿನಗಳ ಮೊದಲನೇ ಹಂತದಲ್ಲಿ ಬೀದರ್, ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಸ್ಮಾರಕಗಳ ದರ್ಶನ ಮಾಡಲಾಯಿತು. ಭೇಟಿ ನೀಡಿದ ಬಹುತೇಕ ಸ್ಮಾರಕಗಳನ್ನು ಆಸಕ್ತ, ಖಾಸಗಿ ವ್ಯಕ್ತಿಗಳಿಗೆ ದತ್ತು ನೀಡಲಾಗಿದೆ.

ಈ ಸ್ಮಾರಕಗಳ ರಕ್ಷಣೆ ಹಾಗೂ ನಿರ್ವಹಣೆಗೆ ಹಲವಾರು ಸಂಸ್ಥೆಗಳು ಸ್ವಯಂಪ್ರೇರಿತವಾಗಿ ಸರ್ಕಾರದ ದತ್ತು ಯೋಜನೆಗೆ ಸ್ಪಂದಿಸಿವೆ ಎಂದರು.



### ಕೃಷ್ಣಕೃಪಾ ಫೌಂಡೇಶನ್‌ಗೆ ಮಳಖೇಡ ಕೋಟೆ ದತ್ತು

ರಾಷ್ಟ್ರಕೂಟರ ರಾಜಧಾನಿಯಾಗಿದ್ದ ಮಾನ್ಯಖೇಟ ಇಂದಿನ ಮಳಖೇಡಕ್ಕೆ ತಂಡ ಭೇಟಿ ಕೊಟ್ಟಿತು. ಮಳಖೇಡ ಕೋಟೆ, ನೃಪತುಂಗನ ಆಡಳಿತದ ಕೇಂದ್ರವಾಗಿತ್ತು. ಚರಿತ್ರಾರ್ಹ ಘಟನೆಗಳಿಗೆ ಸಾಕ್ಷಿಯಾಗಿದ್ದ, ಉತ್ಕೃಷ್ಟವಾದ ಸಾಹಿತ್ಯದ ನೆಲೆಬೀಡಾದ ಈ ಕೋಟೆಗೆ ಭೇಟಿ ಕೊಟ್ಟು ಕೋಟೆಯ ಸಂರಕ್ಷಣೆ ಮತ್ತು ನಿರ್ವಹಣೆಗಾಗಿ ಕಲ್ಬುರ್ಗಿ ಮೂಲದ ಖಾಸಗಿ ಕಂಪನಿ ಕೃಷ್ಣಕೃಪಾ ಫೌಂಡೇಶನ್‌ಗೆ ವಹಿಸಲಾಯಿತು. ಸ್ಥಳದಲ್ಲಿಯೇ ದತ್ತು ಒಪ್ಪಿಗೆ ಪತ್ರವನ್ನು ಕೂಡ ಹಸ್ತಾಂತರಿಸಲಾಯಿತು ಎಂದು ಸಚಿವರು ತಿಳಿಸಿದರು.

### ಶಿರವಾಳದಲ್ಲಿ ಅದ್ಭುತ ಶಿಲ್ಪಕಲಾ ವೈಭವ

ಯಾದಗಿರಿ ಜಿಲ್ಲೆಯ ಶಿರವಾಳ ಗ್ರಾಮಕ್ಕೆ ಭೇಟಿ ನೀಡಿದ ಸಚಿವರ ತಂಡ ಅಲ್ಲಿಯ ಶಿಲ್ಪಕಲಾ ವೈಭವವನ್ನು ನೋಡಿ ಮೂಕವಿಸ್ಮಿತವಾಯಿತು. ಸ್ಥಳೀಯರ ಮಾಹಿತಿಯಂತೆ ಶಿರವಾಳದಲ್ಲಿ 360 ದೇಗುಲಗಳು, 360 ಬಾವಿಗಳು, ಸಾವಿರಾರು ಲಿಂಗಗಳು ಇರುವ ಪ್ರತೀತಿ ಇದೆ. 'ನನ್ನಯ್ಯ ನಾದಯ್ಯ' ಎಂಬ ದೇವಸ್ಥಾನ ಶಿಲ್ಪಕಲೆಯ ವೈವಿಧ್ಯಮಯ ಸಂಸ್ಕೃತಿಯನ್ನು ಹೊರಹೊಮ್ಮಿಸುತ್ತದೆ. ಇತಿಹಾಸ ಮತ್ತು ಸಾಂಸ್ಕೃತಿಕ ಪರಂಪರೆಯ ಪ್ರತೀಕಗಳಾದ ಸ್ಮಾರಕಗಳನ್ನು ರಕ್ಷಿಸಲು ಸರ್ಕಾರದೊಂದಿಗೆ ಸಾರ್ವಜನಿಕ ಸಹಭಾಗಿತ್ವ ಅಪೇಕ್ಷಿಸಲಾಗಿದೆ ಎಂದು ಹೇಳಿದರು.

### ಬೀದರ್ ಜಿಲ್ಲೆಯ ಸ್ಮಾರಕಗಳಿಗೆ ಭೇಟಿ, ಪರಿಶೀಲನೆ

ಐತಿಹಾಸಿಕ ಬೀದರ್ ಜಿಲ್ಲೆಯ ನರಸಿಂಹ ಝರಣಾ ದೇಗುಲ ದರ್ಶನದೊಂದಿಗೆ ಆರಂಭವಾದ ಸಚಿವರ ತಂಡದ ಪ್ರವಾಸ ಕಾರ್ಯಕ್ರಮ ಬೀದರ್‌ನ ಅಷ್ಟಕೋನಾಕಾರದ ಬಾವಿಯ ವೀಕ್ಷಣೆ ಮಾಡಲಾಯಿತು. ಇದಾದ ನಂತರ ಇರಾನ್ ದೇಶದ ಸುರಂಗ ಕಾಲುವೆಗಳನ್ನು ಹೋಲುವ ನೀರಿನ ಕರೇಜ್ (Karez)ನ್ನು ತಂಡ ವೀಕ್ಷಿಸಿತು. ಈ ರೀತಿಯ ನೀರಿನ ಕಾಲುವೆಗಳು ಬೀದರಿನಲ್ಲಿ ವಿಶೇಷಗಳಾಗಿವೆ.

▸▸3 ನೇ ಪುಟಕ್ಕೆ

### ಅಲೆಮಾರಿ, ಅರೆ ಅಲೆಮಾರಿ ಜನಾಂಗದವರ ಸಲಹಾ ಸಮಿತಿ, ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿಸಿ ಸೂಚನೆ

# ತಾಲೂಕಾವಾರು ಸರ್ವೆ ನಡೆಸಿ ಯೋಜನೆಗಳ ಅರಿವು ಮೂಡಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದವರನ್ನು ಸಮಾಜದ ಮುಖ್ಯವಾಹಿನಿಗೆ ತರುವಲ್ಲಿ ವಿವಿಧ ಇಲಾಖೆಗಳು ಕೈ ಜೋಡಿಸಬೇಕು. ವಿವಿಧ ಯೋಜನೆಗಳಡಿ ಈ ಜನಾಂಗದವರಿಗೆ ಸೌಲಭ್ಯಗಳನ್ನು ಒದಗಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರದಂದು ಏರ್ಪಡಿಸಿದ್ದ ಅಲೆಮಾರಿ, ಅರೆ ಅಲೆಮಾರಿ ಜನಾಂಗದವರ ಸಲಹಾ ಸಮಿತಿ ಹಾಗೂ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಿವೇಶನ ಹೊಂದಿದವರಿಗೆ ವಿವಿಧ ವಸತಿ ಯೋಜನೆಗಳಡಿ ಮನೆ ಮಂಜೂರಾತಿಗೆ ಕ್ರಮ ವಹಿಸಬೇಕು.



ತಾಲೂಕಾವಾರು ಸರ್ವೆ ನಡೆಸಿ ಅವರಿಗೆ ಯೋಜನೆಗಳ ಸೌಲಭ್ಯದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಕೈಗೊಳ್ಳಲು ಮುಂದಾಗಬೇಕು ಎಂದು ಸೂಚಿಸಿದರು.

ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ರವಿ ಗುಂಜೀಕರ್ ಮಾತನಾಡಿ, ಇಲಾಖೆಯಿಂದ ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರಿಗಾಗಿ ಮಾಧ್ಯಮಿಕ/ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ, ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅರ್ಹತಾ ವಿದ್ಯಾರ್ಥಿ ವೇತನ, ನಿವೇಶನ ರಹಿತರಿಗೆ ನಿವೇಶನ ಒದಗಿಸಲು ಜಮೀನು ಖರೀದಿ, ವಸತಿ ಸೌಲಭ್ಯ, ಅಲೆಮಾರಿ, ಅರೆ ಅಲೆಮಾರಿ ಜನಾಂಗದ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಒದಗಿಸುವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

**ಸಭೆಯಲ್ಲಿ ವಸತಿ ಯೋಜನೆಯಡಿ ಜಿಲ್ಲೆಗೆ ಮನೆಗಳ ಗುರಿಯನ್ನು ಮರು ನಿಗದಿಪಡಿಸುವ ಕುರಿತು ಹಾಗೂ ಗೊಲ್ಲಸಮುದಾಯದ ಅಲೆಮಾರಿ /ಅರೆ ಅಲೆಮಾರಿ ವಸತಿರಹಿತರಿಗೆ 2021–22ನೇ ಸಾಲಿಗೆ ದೇವರಾಜ ಅರಸು ವಸತಿ ಯೋಜನೆಯಡಿ ಮನೆಗಳನ್ನು ಮಂಜೂರು ಮಾಡುವ ಕುರಿತು ಚರ್ಚಿಸಲಾಯಿತು.**

▸▸3 ನೇ ಪುಟಕ್ಕೆ

### ಶಿವಸಂಗಮದಲ್ಲಿ ನಡೆದ 70ನೇ ಅಖಿಲ ಭಾರತ ಸಹಕಾರ ಸಪ್ತಾಹದಲ್ಲಿ ಈಶ್ವರಪ್ಪ ಮುನವಳ್ಳಿ

# ಸಹಕಾರ ಸಂಸ್ಥೆಗಳು ದೇಶದ ಆರ್ಥಿಕ ಸುಸ್ಥಿರತೆಗೆ ಬೆನ್ನೆಲುಬು

**■ವಿಜಯಸಾಕ್ಷಿ ಸುದ್ದಿ, ಗದಗ**

ಸಹಕಾರ ಇದ್ದರೆ ಸಾಧನೆ ಸಾಕಾರಗೊಳ್ಳಲು ಸಾಧ್ಯ. ದೇಶದ ಸಹಕಾರ ರಂಗಕ್ಕೆ ಬಹು ದೊಡ್ಡ ಕೊಡುಗೆ ನೀಡಿರುವ ಗದಗ ಪರಿಸರದಲ್ಲಿ ಸಹಕಾರ ಸಂಘಗಳು, ಬ್ಯಾಂಕುಗಳು ಪ್ರಗತಿಯಲ್ಲಿ ಮುಂಚೂಣಿಯಲ್ಲಿವೆ ಎಂದು ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಈಶ್ವರಪ್ಪ ಮುನವಳ್ಳಿ ಅಭಿಪ್ರಾಯಪಟ್ಟರು.

ಅವರು ಬುಧವಾರ ಗದುಗಿನ ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘದ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್, ಗದಗ ಸಹಕಾರ ಇಲಾಖೆ, ಗದಗ ಕೆಸಿಸಿ ಬ್ಯಾಂಕ್ ಲಿ., ಕೆಎಂ ಎಫ್ ಧಾರವಾಡ ಗದಗ ಉಪವಿಭಾಗ, ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘದ ಆಶ್ರಯದಲ್ಲಿ 70ನೇ ಅಖಿಲ




ಧಾರವಾಡ ಕೆಸಿಸಿ ಬ್ಯಾಂಕ್ ನಿರ್ದೇಶಕ ಸಿ.ಬಿ. ದೊಡ್ಡಗೌಡ್ರ ಮಾತನಾಡಿ, ಸಹಕಾರಿ ಸಂಘಗಳು, ಸಹಕಾರಿ ಬ್ಯಾಂಕುಗಳು ಜನತೆಗೆ ಅದರಲ್ಲೂ ವಿಶೇಷವಾಗಿ ರೈತರಿಗೆ ಆರ್ಥಿಕ ನೆರವು, ಸಾಲ ಸೌಲಭ್ಯ ನೀಡುತ್ತ ಬಂದಿವೆ. ಪಡೆದ ಸಾಲ ಸದ್ವಿನಿಯೋಗ ಆಗಬೇಕು, ಸರಿಯಾಗಿ ಮರುಪಾವತಿಯಾಗಬೇಕು. ದಕ್ಷಿಣ ಕರ್ನಾಟಕದಲ್ಲಿ ಸಹಕಾರಿ ಸಂಘಗಳು ಬೆಳೆದು ಬರುವಲ್ಲಿ ಸಾಲ ಮತ್ತು ಠೇವಣಿಗೆ ರೈತರು ಸಹಕಾರಿ ಸಂಘಗಳ ಮೇಲೆ ವಿಶ್ವಾಸ ಇಟ್ಟಿದ್ದರ ಪರಿಣಾಮ ಅಲ್ಲಿ ಸಹಕಾರಿ ಸಂಸ್ಥೆಗಳು ಪ್ರಗತಿಯಾಗಿವೆ ಎಂದರು.

▸▸3ನೇ ಪುಟಕ್ಕೆ

# ಮೂಲ ಸೌಕರ್ಯ ಒದಗಿಸದಿದ್ದರೆ ಹೈಕೋರ್ಟ್‌ಗೆ ವರದಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿ ಬಾಲೇಹೊಸೂರು ಗ್ರಾಮದ ಶ್ರೀ ಗುರು ದಿಂಗಾಲೇಶ್ವರ ಹಿರಿಯ ಪ್ರಾಥಮಿಕ ಶಾಲೆಗೆ ಗದಗ ಹಿರಿಯ ದಿವಾಣಿ ನ್ಯಾಯಾಧೀಶರಾದ ಕೆ.ಗುರುಪ್ರಸಾದ ಅವರು ಬುಧವಾರ ಅನಿರೀಕ್ಷಿತ ಭೇಟಿ ನೀಡಿ, ಶಾಲೆಯ ವ್ಯವಸ್ಥೆಗಳನ್ನು ಪರಿಶೀಲಿಸಿದರು.



ಶಾಲೆಯಲ್ಲಿ ಎಲ್ಲ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದ ಅವರು, ಶಾಲೆಯಲ್ಲಿನ ಶೌಚಾಲಯಗಳಿಗೆ ನೀರಿನ ವ್ಯವಸ್ಥೆ ಕಲ್ಪಿಸದೆ ಇರುವದನ್ನು ಕಂಡು ಅಸಮಾಧಾನಗೊಂಡರು. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯನ್ನು ಸ್ಥಳದಲ್ಲೇ ತರಾಟೆಗೆ ತೆಗೆದುಕೊಂಡ ನ್ಯಾಯಾಧೀಶರು, ಸ್ಥಳೀಯ ಆಡಳಿತ ಏನು ಮಾಡುತ್ತಿದೆ, ಶಾಲೆಗಳಿಗೆ ಮಕ್ಕಳು ಕಲಿಯಲು ಬರುತ್ತಿದ್ದು ಅವರಿಗೆ ಮೂಲ ಸೌಲಭ್ಯ ಒದಗಿಸುವುದು ನಿಮ್ಮ ಕರ್ತವ್ಯವಲ್ಲವೇ ಎಂದು ಪ್ರಶ್ನಿಸಿದರು.

▸▸3ನೇ ಪುಟಕ್ಕೆ

## ಸಾಕ್ಷಿ ಸುಭಾಷಿತ

ಇತರರ ನಿಂದನೆಯಲ್ಲಿ ಪಾಂಡಿತ್ಯ, ಸ್ವಕೆಲಸಗಳಲ್ಲಿ ನಿರಾಸಕ್ತಿ, ಗುಣವಂತರ ಜತೆ ದ್ವೇಷ ಕಟ್ಟಿಕೊಳ್ಳುವುದು – ಇವು ಮೂರು ಆಪತ್ತುಗಳಿಗೆ ದಾರಿ .

– ಸುಭಾಷಿತ

## ಸಂಪಾದಕೀಯ

# ಸದಾಶಿವ ಆಯೋಗ ಎನ್ನುವ ಜೇನುಗೂಡು

ರಾಜ್ಯ ಕಾಂಗ್ರೆಸ್ ಸರಕಾರ ಬೆಳಗಾವಿಯಲ್ಲಿ ನಡೆಯಲಿರುವ ಚಳಿಗಾಲದ ಅಧಿವೇಶದನಲ್ಲಿ ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗದ ವರದಿಯನ್ನು ಮಂಡನೆ ಮಾಡುವ ಮಹತ್ವದ ತೀರ್ಮಾನವನ್ನು ಕೈಗೊಂಡಿದೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸಮುದಾಯಗಳಿಗೆ ಒಳಮೀಸಲಾತಿ ಕಲ್ಪಿಸುವ ಸದಾಶಿವ ಆಯೋಗದ ವರದಿ ಸರಕಾರಕ್ಕೆ ಸಲ್ಲಿಕೆಯಾಗಿ ದಶಕವೇ ಕಳೆದಿದೆ. 2012ರಲ್ಲಿ ಡಿ.ವಿ. ಸದಾನಂದಗೌಡ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಆಯೋಗ ವರದಿ ಸಲ್ಲಿಸಿತ್ತು. ಆಯೋಗದ ವರದಿ ಮಂಡನೆ ಮಾಡಿ ಯಥಾವತ್ತಾಗಿ ಜಾರಿಗೊಳಿಸುವಂತೆ ಅನೇಕ ಸಮುದಾಯಗಳು ಬೆಳಗಾವಿಯ ಸುವರ್ಣ ವಿಧಾನಸೌಧದ ಎದುರು ಪ್ರತಿಭಟನೆ ನಡೆಸಿದವು.

ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆ ಅಂದಿನ ಸರಕಾರ ಪ್ರತಿಭಟನಾಕಾರರ ಮೇಲೆ ಲಾಠಿ ಪ್ರಹಾರ ನಡೆಸಿತು. ಇದನ್ನು ರಾಜಕೀಯ ದಾಳವಾಗಿ ಬಳಸಿಕೊಂಡ ಕಾಂಗ್ರೆಸ್ , ಸರಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿತು. 2013ರಲ್ಲಿ ಕಾಂಗ್ರೆಸ್ ಸರಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬರಲು ಸದಾಶಿವ ಆಯೋಗದ ವರದಿ ಜಾರಿಗೆ ನಡೆದ ಹೋರಾಟವನ್ನು ನಿಯಂತ್ರಿಸಲು ಬಿಜೆಪಿ ವಿಫಲವಾಗಿದ್ದು ಸಹ ಒಂದು ಪ್ರಮುಖ ಕಾರಣವಾಗಿತ್ತು.

ಆದರೆ 2013ರಲ್ಲಿ ಅಧಿಕಾರಕ್ಕೆಬಂದ ಕಾಂಗ್ರೆಸ್ ಸರಕಾರ ಸದಾಶಿವ ವರದಿ ಜಾರಿಗೆ ಮುಂದಾಗದೆ ವಿನಾಕಾರಣ ಕಾಲಹರಣ ಮಾಡಿತು. ಅದಾದ ನಂತರ ಅಧಿಕಾರಕ್ಕೆ ಬಂದ ಬಿಜೆಪಿ ಸರಕಾರವೂ ಸದಾಶಿವ ವರದಿ ಜಾರಿ ವಿಷಯದಲ್ಲಿ ಮತ್ತೊಮ್ಮೆ ಎಡವಿತು. ಜೊತೆಗೆ ಮೀಸಲಾತಿ ವಿಷಯವಾಗಿ ತೆಗೆದುಕೊಂಡ ನಿರ್ಧಾರದಿಂದ ಬಿಜೆಪಿ ಮತ್ತೆ ಸೋಲು ಅನುಭವಿಸಬೇಕಾಯಿತು.

ಈಗ ಮತ್ತೆ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಚುನಾವಣೆ ಪೂರ್ವ ನೀಡಿದ ಭರವಸೆ ಈಡೇರಿಸುವ ನಿಟ್ಟಿನಲ್ಲಿ ಸದಾಶಿವ ವರದಿ ಮಂಡನೆಗೆ ಮುಂದಾಗಿದೆ. ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಅವರ ಮುನಿಸಿನ ಮಧ್ಯೆಯೂ ಸರಕಾರ ಆಯೋಗದ ವರದಿ ಮಂಡನೆಗೆ ಮುಂದಾಗಿದೆ. ಕಾಂಗ್ರೆಸ್ ಪಕ್ಷದ ಕೆಲವರಲ್ಲಿಯೇ ವರದಿ ಮಂಡನೆಗೆ ವಿರೋಧವಿದೆ. ಆದರೆ ಡಾ. ಜಿ. ಪರಮೇಶ್ವರ ಸಹಿತ ಅನೇಕ ನಾಯಕರು ವರದಿ ಮಂಡನೆಗೆ ಬೆಂಬಲ ಸೂಚಿಸಿದ್ದರಿಂದ ಕಾಂಗ್ರೆಸ್ ಚಳಿಗಾಲದ ಅಧಿವೇಶನದಲ್ಲಿ ಸದಾಶಿವ ಆಯೋಗದ ವರದಿ ಮಂಡನೆಗೆ ಮುಂದಾಗಿದೆ.

ಸದಾಶಿವ ಆಯೋಗದ ವರದಿ ಎನ್ನುವುದು ಸದ್ಯ ಜೇನುಗೂಡು ಇದ್ದ ಹಾಗೆ. ರಾಜ್ಯ ಸರಕಾರ ಅದಕ್ಕೆ ಅಷ್ಟು ಸುಲಭದಲ್ಲಿ ಕಲ್ಲು ಹೊಡೆಯುವ ಕೆಲಸಕ್ಕೆ ಮುಂದಾಗುವುದಿಲ್ಲ ಎನ್ನುವುದು ನಂಬಿಕೆ. ಹೀಗಾಗಿಯೇ ಸರಕಾರ ಆಯೋಗದ ವರದಿ ಮಂಡನೆಗೆ ಮುಂದಾಗಿದೆ. ಲೋಕಸಭೆ ಚುನಾವಣೆ ಮಾತ್ರವಲ್ಲದೇ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಚುನಾವಣೆ ಸಮೀಪದಲ್ಲಿಯೇ ಕಾಂಗ್ರೆಸ್ ಸದಾಶಿವ ಆಯೋಗದ ವರದಿ ಮಂಡನೆಗೆ ಮುಂದಾಗಿರುವುದು ಕುತೂಹಲ ಮೂಡಿಸಿದೆ.

## ಕಸಾಪ ವತಿಯಿಂದ ಮಕ್ಕಳ ಸಾಹಿತ್ಯದ ಕುರಿತ ವಿಶೇಷ ಉಪನ್ಯಾಸದಲ್ಲಿ ಡಾ. ನಿಂಗು ಸೊಲಗಿ

# ಮಕ್ಕಳ ಸಮಗ್ರ ವಿಕಾಸಕ್ಕೆ ಮಕ್ಕಳ ಸಾಹಿತ್ಯ ಪೂರಕ

■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡದಲ್ಲಿ ಮಕ್ಕಳ ಸಾಹಿತ್ಯವನ್ನು ಸಮೃದ್ಧವಾಗಿ ಬೆಳೆಸಿದವರು ಜನಪದ ತಾಯಂದಿರು. ಹಾಡು, ಮೌಲ್ಯಯುತ ಕತೆಗಳ ಮೂಲಕ ಮಕ್ಕಳ ಮನಸ್ಸನ್ನು ಕಟ್ಟುವ ಕಾರ್ಯ ಮಾಡಿದರು. ಅರಸರ ಆಶ್ರಯದಲ್ಲಿ ಬೆಳೆದ ಕನ್ನಡ ಸಾಹಿತ್ಯದಲ್ಲಿ ಮಕ್ಕಳಿಗೆ ಪೂರಕವಾದ ಸಾಹಿತ್ಯ ಬೆಳೆದುಬರದೇ ಇದ್ದರೂ ನಂತರ ಅವಕಾಶ ದೊರಕಿರುವದು ಕಂಡು ಬರುತ್ತದೆ. ಬಾಲ್ಯದಲ್ಲಿಯೇ ಮಕ್ಕಳಿಗೆ ಉತ್ತಮ ಪುಸ್ತಕಗಳನ್ನು ಓದುವ ಅವಕಾಶ ದೊ–ರೆತರೆ ಮಕ್ಕಳು ಸರ್ವತೋಮುಖವಾಗಿ ವಿಕಾಸ ಹೊಂದಬಲ್ಲರು ಎಂದು ಮಕ್ಕಳ ಸಾಹಿತಿ ಡಾ. ನಿಂಗು ಸೊಲಗಿ ತಿಳಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಡಾ.ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನ ಜಿಲ್ಲಾ ಕಸಾಪ ಕಾರ್ಯಾಲಯದಲ್ಲಿ ರಾಜ್ಯೋತ್ಸವದ ಅಂಗವಾಗಿ ನಡೆದ ವಿಶೇಷ ಉಪನ್ಯಾಸ ಮಾಲಿಕೆಯಲ್ಲಿ ಮಕ್ಕಳ ಸಾಹಿತ್ಯ ಕುರಿತು ಮಾತನಾಡಿದರು.

ಕನ್ನಡದಲ್ಲಿ 1862ರಲ್ಲಿ ಹೊರಬಂದ ಬಾಲ ಗೀತೆಗಳು ಎನ್ನುವ ಮೊದಲ ಸಂಕಲನವನ್ನು ಸಿದ್ಧಪಡಿಸಿ ಜಿ.ಮ್ಯಾಕ್ ಅವರು ಕೆರೋಡಿ ಸುಬ್ಬರಾಯರು, ಎಸ್.ಜಿ. ನರಸಿಂಹಚಾರ್ಯರು ಇಂಗ್ಲಿಷ್ ಭಾಷೆಯಿಂದ ಮಕ್ಕಳಿಗಾಗಿ ಕೆಲವು ಕವಿತೆಗಳನ್ನು ಅನುವಾದಿಸಿದರು. 19ನೇ ಶತಮಾನದ ಉತ್ತರಾರ್ಧದಲ್ಲಿ ಮಕ್ಕಳಿಗೆಂದೇ ಸಿದ್ಧಪಡಿಸಿದ ಪುಸ್ತಕಗಳಲ್ಲಿ, ವಾಚಿಕೆಗಳಲ್ಲಿ ಮಕ್ಕಳ ಕವಿತೆಗಳು ಕಂಡುಬರುತ್ತವೆ. ಈ ಪ್ರಯತ್ನಗಳಲ್ಲಿ ಕ್ರೈಸ್ತ ಮಿಷನರಿಗಳ ಪಾತ್ರ ಶ್ಲಾಘನೀಯವಾದುದು. ಪಂಜೆ ಮಂಗೇಶರಾಯರು, ಹೊಯಿಸಳ, ಜಿ.ಪಿ. ರಾಜರತ್ನಂ ಇವರನ್ನು ಮಕ್ಕಳ ಸಾಹಿತ್ಯದ ರತ್ನತ್ರಯರು ಎನ್ನಬಹುದಾಗಿದೆ. ಇಂಥ ಹಿರಿಯರೆಲ್ಲ ಬಿತ್ತಿದ ನೆಲಕ್ಕೆ ನೀರೆರೆದು ಪೋಷಿಸಿದವರು ಶಂ.ಗು. ಬಿರಾದಾರ, ಕಯ್ಯಾರ ಕಿಞ್ಞಣ್ಣ ರೈ, ಸಿಸು ಸಂಗಮೇಶ, ಬಿ.ಎ. ಸನದಿ, ರಸಿಕ ಪುತ್ತಿಗೆ, ಈಶ್ವರ ಕಮ್ಮಾರ, ಚನ್ನವೀರ ಕಣವಿ, ಕಂಚ್ಯಾಣಿ ಶರಣಪ್ಪ, ಎಚ್.ಎಸ್. ವೆಂಕಟೇಶಮೂರ್ತಿ, ಎಂ.ವಿ. ಸೀತಾರಾಮಯ್ಯ ಮೊದಲಾದವರಾಗಿದ್ದಾರೆಂದು ನುಡಿದರು.



ಇದೇ ಸಂದರ್ಭದಲ್ಲಿ ತೈಲವರ್ಣದ ಭುವನೇಶ್ವರಿ ಚಿತ್ರ ರಚಿಸಿದ ಖ್ಯಾತ ಚಿತ್ರಕಲಾವಿದ ಸಿ.ಎನ್. ಪಾಟೀಲ ಅವರ ಮಗಳಾದ ಲಲಿತಾ ಪಾಟೀಲರನ್ನು ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಕರ್ನಾಟಕ ಸುವರ್ಣ ಸಂಭ್ರಮವನ್ನು ಗದುಗಿನಲ್ಲಿ ಆಚರಿಸಿದ ಸಂದರ್ಭದಲ್ಲಿ ತಮ್ಮ ತಂದೆಯವರು ರಚಿಸಿದ ಭುವನೇಶ್ವರಿ ಚಿತ್ರವನ್ನು ಎಲ್ಲ ಆಯಾಮಗಳಲ್ಲಿ ಬಳಸಿಕೊಂಡಿದ್ದು ಸಂತಸದ ಸಂಗತಿಯಾಗಿದೆ. ಆದರೆ ಅವರ ಮನೆತನದವರನ್ನು ಮರೆತಿರುವದು ಮನಸ್ಸಿಗೆ ನೋವನ್ನು ಉಂಟುಮಾಡಿದೆ. ಪರಿಷತ್ತು ಗುರುತಿಸಿ ಗೌರವಿಸಿರುವದು ಸಂತಸ ತಂದಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಮನೆ ಮತ್ತು ಶಾಲೆಗಳಲ್ಲಿ ಸಾಹಿತ್ಯದ ಓದು ಮತ್ತು ರಚನೆಗೆ ಅವಕಾಶ ಕಲ್ಪಿಸುವ ಶಿಕ್ಷಣ ವ್ಯವಸ್ಥೆ ರೂಪಗೊಳ್ಳಬೇಕು. ಒಂದೇ ಪಠ್ಯಪುಸ್ತಕವನ್ನು ಓದುವ ಬದಲು ಸಣ್ಣ ಸಣ್ಣ ಅನೇಕ ಪುಸ್ತಕಗಳನ್ನು ಓದುವ ಅವಕಾಶ ದೊರೆಯಬೇಕು. ಭಾಷಾ ಪರೀಕ್ಷೆಗಳ ವ್ಯವಸ್ಥೆಯಲ್ಲಿ ಬದಲಾವಣೆಯಾಗಬೇಕು. ಮಕ್ಕಳು ಇಂದು ಅಂಕ ಗಳಿಕೆಯ ವಸ್ತುಗಳಾಗಿದ್ದಾರೆ. ಶಾಲೆಗಳು ಅಂಕಗಳನ್ನು ಉತ್ಪಾದಿಸುವ ಫ್ಯಾಕ್ಟರಿಗಳಾಗಿರುವದರಿಂದ ಮಕ್ಕಳು ಸೃಜನಶೀಲರಾಗಿ ಬೆಳೆದುಬರುವ ಅವಕಾಶ ಕ್ಷೀಣಿಸಿವೆ ಎಂದರು.

ಸಂಗೀತ ಕಲಾವಿದ ಮಹೇಶ ಕುಂದ್ರಾಳಹಿರೆಮಠ ಇವರಿಂದ ಕನ್ನಡ ಗೀತೆಗಳ ಗಾಯನ ಕಾರ್ಯಕ್ರಮ ನೆರವೇರಿತು. ವೇದಿಕೆ ಮೇಲೆ ಲಿಂಗರಾಜ ಪಾಟೀಲ ಉಪಸ್ಥಿತರಿದ್ದರು. ಪ್ರೊ. ಡಿ.ಎಸ್. ನಾಯಕ ನಿರೂಪಿಸಿದರು. ಕಾರ್ಯದರ್ಶಿ ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಶಿವಾನಂದ ಗಿಡ್ನಂದಿ ವಂದಿಸಿದರು.

ಕಾರ್ಯಕ್ರಮದಲ್ಲಿ ಪ್ರೊ. ಚಂದ್ರಶೇಖರ ವಸ್ತ್ರದ, ಪ್ರೊ. ಅನ್ನದಾನಿ ಹಿರೇಮಠ, ಜಿ.ಎ. ಪಾಟೀಲ, ಎಂ.ವಿ. ಕೆಂಬಾವಿಮಠ, ಬಸವರಾಜ ನೆಲಜೇರಿ, ಮರುಳಸಿದ್ದಪ್ಪ ದೊಡ್ಡಮನಿ, ಗೌಸಪಾಕ್ ರಾಜನಾಳ, ಜೆ.ಎ. ಪಾಟೀಲ, ಡಾ. ಬಿ.ಎಲ್. ಚವಾಣ, ಡಾ. ಶಂಕರ ಬಾರಿಕೇರ, ಎಚ್.ಟಿ. ಸಂಜೀವಸ್ವಾಮಿ, ಶಶಿಕಾಂತ ಕೊರ್ಲಹಳ್ಳಿ, ಎಸ್.ಎಫ್. ಬೆನಕಣ್ಣವರ, ಸಿ.ಎಂ. ಮಾರನಬಸರಿ, ರಾಜಶೇಖರ ಕರಡಿ, ಎಂ.ಎಚ್. ಹುಲ್ಲೂರ, ಎಲ್.ಈ. ಮಾಂಡ್ರೆ, ಗಜಾನನ ವೆರ್ಣೇಕರ, ಆರ್.ಬಿ. ಕವಲೂರ, ಎಲ್.ಸಿ. ಪಾಟೀಲ, ರತ್ನಕ್ಕ ಪಾಟೀಲ, ಗೀತಾ ಕಬಾಡಿ, ಎಸ್.ಎಂ. ಕಾತರಕಿ, ಎಂ.ಎಚ್. ಸವದತ್ತಿ, ಬಿ.ಎಸ್. ಹಿಂಡಿ, ಶ್ರೀನಿವಾಸ ಕುಲಕರ್ಣಿ, ಈಶ್ವರ ಕುರಿ, ಲಿಂಗರಾಜ ಪಾಟೀಲ, ಯು. ಎಸ್. ಕಣವಿ, ರತ್ನಾ ಪುರಂತರ, ಬಿ.ಬಿ. ಹಡಪದ, ಎಸ್.ಸಿ. ಹಾಲಕೇರಿ, ಆರ್. ಎಲ್. ಮ್ಯಾಗೇರಿ, ಮಹೇಶ ಶಟವಾಜಿ, ಸೃಜನಾ ಶಟವಾಜಿ, ಸಹನಾ ಗಾಜಿ, ವೈಷ್ಣವಿ ಗಾಜಿ, ಪಾರ್ವತಿ ಬೇವಿನಮರದ, ಪ್ರ.ತೋ. ನಾರಾಯಣಪುರ ಹಾಜರಿದ್ದರು.

## ಸುಗಮ ಸಂಗೀತ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಬಸವರಾಜ ಈರಣ್ಣವರ

# ಒತ್ತಡ ಮುಕ್ತ ಜೀವನಕ್ಕೆ ಸಂಗೀತ ಸಹಕಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇಂದು ನಾವು ಪ್ರತಿಯೊಂದು ಹಂತದಲ್ಲಿಯೂ ಒಂದಿಲ್ಲೊಂದು ಸ್ಪರ್ಧೆಯನ್ನು ಎದುರಿಸುತ್ತಿದ್ದೇವೆ. ಆಧುನಿಕ ಜಗತ್ತಿನಲ್ಲಿ ಬದುಕುತ್ತಿರುವ ನಮಗೆ ಟಿ.ವಿ., ಕಂಪ್ಯೂಟರ್, ಇಂಟರ್‌ನೆಟ್ ಇನ್ನೂ ಮುಂತಾದ ಇಲೆಕ್ಟ್ರಾನಿಕ್ ಮಾಧ್ಯಮಗಳು ನಮ್ಮ ಮನಸ್ಸುಗಳನ್ನು ಕೇಂದ್ರೀಕರಿಸಿ, ಒತ್ತಡಕ್ಕೆ ಸಿಲುಕಿಸುವಂತೆ ಮಾಡುತ್ತಾ ಬಂದಿವೆ. ಇಂತಹ ಒತ್ತಡ ಮುಕ್ತ ಜೀವನಕ್ಕೆ ಸಂಗೀತ ಸಹಕಾರಿ ಎಂದು ಕಲಾವಿದರಾದ ಬಸವರಾಜ ಈರಣ್ಣವರ ಹೇಳಿದರು.



ಅವರು ಇತ್ತೀಚೆಗೆ ತಾಲೂಕಿನ ಹುಯಿಲಗೋಳ ಗ್ರಾಮದಲ್ಲಿ ಕರ್ನಾಟಕ ಸರಕಾರ, ಸಂಗೀತ ಮತ್ತು ನೃತ್ಯ ಅಕ್ಯಾಡೆಮಿ ಬೆಂಗಳೂರು ಹಾಗೂ ಜೇನುಗೂಡು ಜಾನಪದ ಕಲಾತಂಡ ಹುಯಿಲಗೋಳ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಸುಗಮ ಸಂಗೀತ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಗ್ರಾಮ ಪಂಚಾಯಿತಿ ಸದಸ್ಯ ಮಿಲಿಂದ ಕಾಳಿ ಮಾತನಾಡಿ, ಸರಕಾರದ ಸೌಲಭ್ಯವನ್ನು ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳುವುದರೊಂದಿಗೆ ಪಂಚಾಯಿತಿ ಮಟ್ಟದಲ್ಲಿ ಕಲಾವಿದರಿಗೆ ಸಿಗಬೇಕಾದ ಸೌಲಭ್ಯಗಳನ್ನು ನಾವು ಪ್ರಾಮಾಣಿಕವಾಗಿ ದೊರಕಿಸಿಕೊಡುತ್ತೇವೆ. ಸಂಬಂಧಪಟ್ಟ ಕಲಾವಿದರು ಮತ್ತು ಕಲಾತಂಡಗಳು ನಮ್ಮ ಪಂಚಾಯಿತಿಗೆ ಅರ್ಜಿ ನೀಡಿ ಸದುಪಯೋಗ ಪಡೆಯಿರಿ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾ.ಪಂ ಉಪಾಧ್ಯಕ್ಷೆ ನೀಲವ್ವ ರಮೇಶ ಕಡಿಯವರ ವಹಿಸಿದ್ದರು. ವೇದಿಕೆ ಮೇಲೆ ಗ್ರಾಮದ ಹಿರಿಯರಾದ ಮುದುಕಪ್ಪ ಪೂಜಾರ, ದುರಗಪ್ಪ ಈರಗಾರ, ರಮೇಶ ಕಡಿಯವರ ಮುಂತಾದವರು ಉಪಸ್ಥಿತರಿದ್ದರು. ಸುಗಮ ಸಂಗೀತ ತರಬೇತಿ ಪಡೆದ ಕಲಾವಿದರಾದ ಮೈಲಾರಪ್ಪ ಹರಿಜನ, ಬಾಬು ಚಲವಾದಿ, ಶರಣಪ್ಪ ಈರಣ್ಣವರ, ವಿಶ್ವನಾಥ ಕಾಳಿ, ಪ್ರಭು ಕಡಿಯವರ, ಮಂಜುನಾಥ ಲಿಂಗದಾಳ, ಪ್ರಜ್ವಲ್ ಕಾಳಿ, ಪೂಜಾ ಲಿಂಗದಾಳ, ಸುನೀಲ ಈರಣ್ಣವರ, ವೆಂಕಟೇಶ ಪೂಜಾರ ಮುಂತಾದವರು ಗಾಯನ ಪ್ರಸ್ತುತಪಡಿಸಿದರು. ಶರಣಪ್ಪ ಯಡಿಯಾಪೂರ ಸ್ವಾಗತಿಸಿ, ನಿರೂಪಿಸಿದರು. ಗೌಡಪ್ಪ ಪವಾಡಿಗೌಡರ ವಂದಿಸಿದರು.

# ಬೆಂಗಳೂರು–ಧಾರವಾಡ 'ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು' ಸೇವೆ ಬೆಳಗಾವಿಯವರೆಗೆ



■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಜಿಲ್ಲೆಯ ಜನರ ಬಹು ದಿನಗಳ ಬೇಡಿಕೆಯಾದ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲನ್ನು ಬೆಂಗಳೂರು–ಧಾರವಾಡ ದಿಂದ ಬೆಳಗಾವಿಯವರೆಗೆ ವಿಸ್ತರಣೆ ಮಾಡಿ ರೈಲ್ವೆ ಸಚಿವಾಲಯ ಆದೇಶ ನೀಡಿರುವುದಾಗಿ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ತಿಳಿಸಿದ್ದಾರೆ. ಅವರು ಕುರಿತ ಆದೇಶವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

**ರೈಲಿನ ವೇಳಾಪಟ್ಟಿ ಇಂತಿದೆ:** ಬೆಂಗಳೂರು–ಬೆಳಗಾವಿ ರೈಲು ಸಂಖ್ಯೆ (20661) ಬೆಳ್ಳಿಗೆ 05.45 ಕ್ಕೆ ಬೆಂಗಳೂರು ನಿಲ್ದಾಣದಿಂದ ಹೊರಟು ಮಧ್ಯಾಹ್ನ 01.30 ಕ್ಕೆ ಬೆಳಗಾವಿ ತಲುಪಲಿದೆ.

ಹುಬ್ಬಳ್ಳಿ –ಧಾರವಾಡ ನಡುವೆ ಜೂನ್ 27ರಿಂದ ವಂದೇ ಭಾರತ್ ರೈಲು ಸಂಚಾರ ಪ್ರಾರಂಭಗೊಂಡಿತ್ತು. ಆದರೆ ಬೆಳಗಾವಿಯವರೆಗೆ ವಿಸ್ತರಿಸುವ ಬೇಡಿಕೆಗೆ ಸ್ಪಂದನೆ ಸಿಕ್ಕಿರಲಿಲ್ಲ. ಜನಪ್ರತಿನಿಧಿಗಳು ಮತ್ತು ಸಾರ್ವಜನಿಕರ ಬೇಡಿಕೆಗೆ ಮಣಿದ ರೈಲ್ವೆ ಇಲಾಖೆ ಕೊನೆಗೂ ಬೆಳಗಾವಿಗೆ ಸಂಚಾರ ಪ್ರಾರಂಭಿಸುತ್ತಿದೆ.

# ಬಿಜೆಪಿ ರಾಜ್ಯಾಧ್ಯಕ್ಷರಾಗಿ ವಿಜಯೇಂದ್ರ ಅಧಿಕಾರ ಸ್ವೀಕಾರ: ಕೆಲವು ನಾಯಕರು ಗೈರು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಳೆದ ವಿಧಾನಸಭೆ ಚುನಾವಣೆಯಲ್ಲಿ ಹೀನಾಯ ಸೋಲಿನ ನಂತರ ರಾಜ್ಯ ಬಿಜೆಪಿಯಲ್ಲಿ ಈಗ ಮತ್ತೆ ರಾಜಕೀಯ ಚಟುವಟಿಕೆಗಳು ಗರಿಗೆದರಿವೆ. ಬಿಜೆಪಿಯ ಶಕ್ತಿ ಕೇಂದ್ರ ಬೆಂಗಳೂರಿನ ಮಲ್ಲೇಶ್ವರದಲ್ಲಿರುವ ಜಗನ್ನಾಥ ಭವನದಲ್ಲಿ ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪನವರ ಪುತ್ರ ಶಿಕಾರಿಪುರ ಕ್ಷೇತ್ರದ ಶಾಸಕ, ಯುವ ನಾಯಕ ಬಿ ವೈ ವಿಜಯೇಂದ್ರ ಅವರು ರಾಜ್ಯಾಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿಕೊಂಡಿದ್ದಾರೆ.

ರಾಜ್ಯ ಬಿಜೆಪಿಯ ಹಿರಿಯ ನಾಯಕರು, ಸಂಸದರು, ಶಾಸಕರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ. ನಿಕಟಪೂರ್ವ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲು ವಿಜಯೇಂದ್ರ ಅವರಿಗೆ ಕೇಸರಿ ಶಾಲು ತೊಡಿಸಿ ಸನ್ಮಾನಿಸಿ ಅಧಿಕಾರ ಹಸ್ತಾಂತರ ಮಾಡಿದರು.

ಇದಕ್ಕೂ ಮುನ್ನ ವಿಜಯೇಂದ್ರ ಅವರು ತಂದೆ ಯಡಿಯೂರಪ್ಪನವರ ಕಾಲಿಗೆ ನಮಸ್ಕರಿಸಿ ಬಿಜೆಪಿ ಕಚೇರಿಯಲ್ಲಿ ಹೋಮ, ಹವನ ಧಾರ್ಮಿಕ ವಿಧಿವಿಧಾನಗಳಲ್ಲಿ ಭಾಗಿಯಾದರು. ಕಾರ್ಯಕ್ರಮದಲ್ಲಿ ಮಾಜಿ ಸಚಿವರಾದ ಕೆ ಎಸ್ ಈಶ್ವರಪ್ಪ, ಆರ್ ಅಶೋಕ್, ಬಸವರಾಜ ಬೊಮ್ಮಾಯಿ, ವಿ ಗೋಪಾಲಯ್ಯ, ಆದರ ಜ್ಞಾನೇಂದ್ರ ಸೇರಿದಂತೆ ಹಲವರು ಭಾಗಿಯಾಗಿದ್ದಾರೆ. ಯಡಿಯೂರಪ್ಪ ಬಣದವರಿಗೆ ಇಂದು ಹಬ್ಬದ ಸಂಭ್ರಮವಿದೆ.

ಪಕ್ಷ ಸಂಘಟನೆಗಾಗಿ ನಾವೆಲ್ಲ ವಿಜಯೇಂದ್ರ ಜತೆ ಇರುತ್ತೇವೆ ಎಂದು ಬೆಂಗಳೂರಿನಲ್ಲಿ ಬಿಜೆಪಿ ಶಾಸಕ ಎಸ್.ಆರ್.ವಿಶ್ವನಾಥ್ ತಿಳಿಸಿದರು. ಲೋಕಸಭಾ ಚುನಾವಣೆಯಲ್ಲಿ 28 ಸ್ಥಾನಗಳನ್ನೂ ಗೆಲ್ಲಲು ಸಿದ್ಧತೆ ನಡೆದಿದೆ. ಈಗಾಗಲೇ ಬಿ.ವೈ.ವಿಜಯೇಂದ್ರ ಪ್ರವಾಸ ಶುರು ಮಾಡಿದ್ದಾರೆ.

ನಾವೆಲ್ಲ ಉತ್ಸಾಹದಿಂದ ಅವರ ಜತೆ ಕೆಲಸ ಮಾಡಲು ಸಿದ್ಧರಿದ್ದೇವೆ ಎಂದರು.



**ಕೆಲವರು ಗೈರು:** ಬಿಜೆಪಿಯಲ್ಲಿ ಪ್ರಮುಖ ಸ್ಥಾನ ಪಡೆಯುವ ನಿರೀಕ್ಷೆಯಲ್ಲಿದ್ದ ಅಸಮಾಧಾನಿತರು ಎಂದು ಗುರುತಿಸಿಕೊಂಡಿರುವ ವಿ ಸೋಮಣ್ಣ, ಬಸನಗೌಡ ಪಾಟೀಲ್ ಯತ್ನಾಳ್, ಅರವಿಂದ ಬೆಲ್ಲದ್ ಕಾರ್ಯಕ್ರಮದಲ್ಲಿ ಭಾಗಿಯಾಗಿಲ್ಲ. ಮಧ್ಯ ಪ್ರದೇಶ ಚುನಾವಣೆ ಪ್ರಚಾರದಲ್ಲಿರುವ ಸಿ ಟಿ ರವಿಯವರು ಅಲ್ಲಿಂದಲೇ ವಿಜಯೇಂದ್ರ ಅವರಿಗೆ ಶುಭಕೋರಿದ್ದಾರೆ.

# ಮೊಬೈಲ್ ಡಿಜಿಲಾಕರ್‌ನಲ್ಲಿ ಐಡಿ ಪ್ರೂಫ್ ತೋರಿಸಿ ಉಚಿತ ಪ್ರಯಾಣಿಸಲು ಅವಕಾಶ




■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಇನ್ನು ಮುಂದೆ ಮಹಿಳಾ ಪ್ರಯಾಣಿಕರು ಡಿಜಿಲಾಕರ್ ಆ್ಯಪ್ ಮೂಲಕ ತಮ್ಮ ಫೋನ್‌ನಲ್ಲಿ ಸ್ಥಳೀಯ ನಿವಾಸದ ಪುರಾವೆಗಳನ್ನು ತೋರಿಸಿ ಶಕ್ತಿ ಯೋಜನೆಯಡಿ ರಾಜ್ಯ ಸರ್ಕಾರಿ ಬಸ್‌ಗಳಲ್ಲಿ ಪ್ರಯಾಣಿಸಬಹುದು. ಇನ್ನು ಮುಂದೆ ಅವರ ಐಡಿಗಳ (ಮೂಲ ಅಥವಾ ಫೋಟೊಕಾಪಿ) ಮೂಲ ಪ್ರತಿಯನ್ನು ಒಯ್ಯುವ ಅಗತ್ಯವಿರುವುದಿಲ್ಲ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ವಾಯವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಯಾದ್ಯಂತ ಮಹಿಳಾ ಪ್ರಯಾಣಿಕರು ಪದೇ ಪದೇ ಅಧಿಕಾರಿಗಳಿಗೆ ದೂರು ನೀಡಿದ್ದು, ಮೂಲ ಆಧಾರ್ ಕಾರ್ಡು ತರದಿದ್ದರೆ ಟಿಕೆಟ್ ಖರೀದಿಸುವಂತೆ ಕಂಡಕ್ಟರ್‌ಗಳು ಒತ್ತಾಯಿಸುತ್ತಾರೆ ಎಂದು ಹೇಳುತ್ತಿದ್ದರು.

"ಮಹಿಳಾ ಪ್ರಯಾಣಿಕರು ಡಿಜಿಲಾಕರ್ ಅಪ್ಲಿಕೇಶನ್ ಮೂಲಕ ತಮ್ಮ ಐಡಿಗಳನ್ನು ತೋರಿಸಲು ಅವಕಾಶವಿದ್ದರೂ, ಅನೇಕ ಕಂಡಕ್ಟರ್‌ಗಳು ಅದನ್ನು ತಿರಸ್ಕರಿಸುತ್ತಿದ್ದರು. ಹಾರ್ಡ್ ಕಾಪಿಗಳನ್ನು ಒತ್ತಾಯಿಸುತ್ತಿದ್ದಾರೆ ಎಂದು ಕೆಎಸ್‌ಆರ್‌ಟಿಸಿ ಪ್ರಯಾಣಿಕರಾದ ಧನಲಕ್ಷ್ಮಿ ಹೇಳಿದರು.

ನವೆಂಬರ್ 3 ರಂದು ಕೆಎಸ್‌ಆರ್‌ಟಿಸಿ ಮುಖ್ಯ ಸಂಚಾರ ವ್ಯವಸ್ಥಾಪಕರ ಪತ್ರವನ್ನು ಉಲ್ಲೇಖಿಸಿ, ಕೆಕೆಆರ್‌ಟಿಸಿ, "ಕಂಡಕ್ಟರ್‌ಗಳು ಗುರುತಿನ ಪುರಾವೆಗಳನ್ನು ಹಾರ್ಡ್ ಕಾಪಿಗಳ ಮೂಲಕ (ಒರಿಜಿನಲ್ ಅಥವಾ ಫೋಟೊಕಾಪಿ) ಮತ್ತು ಡಿಜಿಲಾಕರ್ ಮೂಲಕ ಸ್ವೀಕರಿಸಬಹುದು ಎಂಬ ಆದೇಶದ ಹೊರತಾಗಿಯೂ, ಕೆಲವು ಬಸ್ ಕಂಡಕ್ಟರ್‌ಗಳು ಡಿಜಿಲಾಕರ್ ಮೂಲಕ ತೋರಿಸಿರುವ ಪುರಾವೆಗಳನ್ನು ಸ್ವೀಕರಿಸಲು ನಿರಾಕರಿಸುತ್ತಿದ್ದಾರೆ. ಮಹಿಳಾ ಪ್ರಯಾಣಿಕರಿಗೆ ಅನಗತ್ಯ ತೊಂದರೆಗಳನ್ನು ಸೃಷ್ಟಿಸುತ್ತಿದ್ದಾರೆ ಎಂದು ಹೇಳಿದೆ.

ಕಂಡಕ್ಟರ್‌ಗಳು ಡಿಜಿಲಾಕರ್ ಮೂಲಕ ಐಡಿ ಪುರಾವೆಗಳನ್ನು ಸ್ವೀಕರಿಸಬೇಕು ಮತ್ತು ಮಹಿಳಾ ಪ್ರಯಾಣಿಕರಿಗೆ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು ಎನ್ನುತ್ತಾರೆ

# ಎಂಡಿಆರ್‌ಎಸ್ ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರಕಾರ, ಜಿಲ್ಲಾ ಪಂಚಾಯಿತಿ ಗದಗ, ಉಪನಿರ್ದೇಶಕರ ಕಾರ್ಯಾಲಯ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಗದಗ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಜಿಲ್ಲಾ ಸಂಸ್ಥೆ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳಿಗಾಗಿ 2023–24ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಗೀತ ಗಾಯನ ಸ್ಪರ್ಧೆ ಏರ್ಪಡಿಸಲಾಗಿತ್ತು.

ಈ ಸ್ಪರ್ಧೆಯಲ್ಲಿ ಮುಂಡರಗಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳು ದೇಶ ಭಕ್ತಿಗೀತೆ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದು, ನವೆಂಬರ್ 19ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ.

ಸಾಧನೆಗೈದ ವಿದ್ಯಾರ್ಥಿಗಳಿಗೆ ಜಿಲ್ಲಾ ಸಮಾಜ ಕಲ್ಯಾಣ ಉಪನಿರ್ದೇಶಕರಾದ ಪ್ರಶಾಂತ ವರಗಪ್ಪನವರ, ಶಾಲೆಯ ಪ್ರಾಂಶುಪಾಲರು, ಗೈಡ್ಸ್ ಕ್ಯಾಪ್ಟನ್ ಹಾಗೂ ಸ್ಕೌಟ್ಸ್ ಮಾಸ್ಟರ್, ಬೋಧಕ–ಬೋಧಕೇತರ ಸಿಬ್ಬಂದಿ ವರ್ಗ ಅಭಿನಂದನೆ ಸಲ್ಲಿಸಿದ್ದಾರೆ.

# ವಿದ್ಯುತ್ ಕಳವು ಆರೋಪ: ಹೆಚ್.ಡಿ ಕುಮಾರಸ್ವಾಮಿ ವಿರುದ್ಧ ಎಫ್‌ಆರ್ ದಾಖಲು!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

: ವಿದ್ಯುತ್ ಕಳ್ಳತನದ ಆರೋಪದ ಮೇಲೆ ಮಾಜಿ ಮುಖ್ಯಮಂತ್ರಿ, ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್‌ಡಿ ಕುಮಾರಸ್ವಾಮಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಬೆಸ್ಕಾಂ ಅಧಿಕಾರಿಗಳು ನೀಡಿದ ದೂರಿನ ಅನ್ವಯ ಕುಮಾರಸ್ವಾಮಿ ಅವರ ವಿರುದ್ಧ ಜಯನಗರ ಜಾಗೃತದಳದ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಮಂಗಳವಾರ (ನ.14) ರಂದು ಅಪರಾಧ ಎಸಗಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಎಇಇ ಪ್ರಶಾಂತ್ ಕುಮಾರ್ ಎಂಬುವವರು ದೂರು ನೀಡಿದ್ದಾರೆ. ಈ ದೂರಿನನ್ವಯ ಎಫ್‌ಐಆರ್ ದಾಖಲು ಮಾಡಿಕೊಳ್ಳಲಾಗಿದೆ ಎಂದು ತಿಳಿದುಬಂದಿದೆ. ಎಚ್.ಡಿ ಕುಮಾರಸ್ವಾಮಿಯವರು ಬೆಂಗಳೂರಿನ ಜೆಪಿ ನಗರದ ತಮ್ಮ ನಿವಾಸದಲ್ಲಿ ದೀಪಾವಳಿಯ ದೀಪಾಲಂಕಾರಕ್ಕೆ ನೇರವಾಗಿ ವಿದ್ಯುತ್ ಕಂಬದಿಂದ ಅಕ್ರಮ ವಿದ್ಯುತ್ ಸಂಪರ್ಕ ಪಡೆದಿದ್ದಾರೆ ಎಂದು ಕಾಂಗ್ರೆಸ್ ಆರೋಪಿಸಿತ್ತು. ಈ ಕುರಿತು ವಿಡಿಯೋ, ಫೋಟೋ ಸಮೇತ ಕಾಂಗ್ರೆಸ್ ಟ್ವೀಟ್ ಮಾಡಿದೆ.

## ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.

ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..

ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.

E-mail: vijayasakshidaily@gmail.com

ಮೊ : 9019256545

# ತಾಲೂಕಾವಾರು ಸರ್ವೇ ನಡೆಸಿ ಯೋಜನೆಗಳ ಅರಿವು ಮೂಡಿಸಿ

▶▶ ಮೊದಲನೇ ಪುಟದಿಂದ

ಇಲಾಖೆಯಿಂದ ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿದ ವಿದ್ಯಾರ್ಥಿಗಳ ಮಾಧ್ಯಮಿಕ ಹಾಗೂ ಪ್ರೌಢಶಿಕ್ಷಣಕ್ಕೆ ಆರ್ಥಿಕ ನೆರವು ನೀಡುವ ಉದ್ದೇಶದಿಂದ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ಶಿಷ್ಯವೇತನ ಪ್ರತಿ ಮಾಹೆಯ 200 ರೂ. ನೀಡಲಾಗುತ್ತಿದೆ.

ಜಿಲ್ಲೆಯಲ್ಲಿ 2022–23ನೇ ಸಾಲಿನ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ 614 ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ 12,28,000/– ರೂ.ಗಳನ್ನು ಮಂಜೂರು ಮಾಡಲಾಗಿದೆ. 2022–23ನೇ ಸಾಲಿನಲ್ಲಿ 189 ವಿದ್ಯಾರ್ಥಿಗಳಿಗೆ 685000 ರೂ. ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಂಜೂರು ಮಾಡಲಾಗಿದೆ ಎಂದು ತಿಳಿಸಿದರು.

ಅಲೆಮಾರಿ/ ಅರೆ ಅಲೆಮಾರಿ ಜನಾಂಗದದ ನಿವೇಶನ ರಹಿತರಿಗೆ ಹಾಗೂ ಗುಡಿಸಲುಗಳಲ್ಲಿ ವಾಸಿಸುತ್ತಿರುವವರಿಗೆ ನಿರ್ದಿಷ್ಟ ನೆಲೆಯಿಲ್ಲದೇ ಒಂದು ಪ್ರದೇಶದಿಂದ ಇನ್ನೊಂದು ಪ್ರದೇಶಕ್ಕೆ ವಲಸೆ ಹೋಗುವವರಿಗೆ ಒಂದೇ ಕಡೆ ನೆಲೆ ನಿಲ್ಲುವಂತೆ ಮಾಡುವದಕ್ಕೋಸ್ಕರ ವಸತಿ ಸೌಲಭ್ಯ ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ತಾಲೂಕುವಾರು ಸರ್ವೆ ಪ್ರಕಾರ ಜಿಲ್ಲೆಯಲ್ಲಿ 1687 ಅಲೆಮಾರಿ/ ಅರೆ ಅಲೆಮಾರಿ ಜನಾಂಗಗಳ ಕುಟುಂಬಗಳಿದ್ದು ಆ ಪೈಕಿ 757 ಕುಟುಂಬಗಳಿಗೆ ಸ್ವಂತ ಮನೆಗಳಿವೆ. 930 ಕುಟುಂಬಗಳು ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದು 57 ಕುಟುಂಬಗಳು ನಿವೇಶನ ಹೊಂದಿದವರಾಗಿದ್ದಾರೆ.

ನಿವೇಶನ ಇಲ್ಲದ 873 ಕುಟುಂಬಗಳಿವೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್, ತಾಲೂಕಾ ಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಅಲೆಮಾರಿ/ಅರೆ ಅಲೆಮಾರಿ ಸಮುದಾಯದ ಪ್ರತಿನಿಧಿಗಳಾದ ವಿಠಲ ಗಣಾಚಾರಿ, ಹರೀಶ ಪೂಜಾರ, ಕೆಂಚಪ್ಪ ಹೆಳವರ ಸಲಹಾ ಸಮಿತಿ ಸದಸ್ಯರು ಇದ್ದರು.

## ದೇವತಾ ಪ್ರತಿಷ್ಠಾಪನೆ, ಜಂಗಮ ವಟುಗಳಿಗೆ ಅಯ್ಯಾಚಾರ ದೀಕ್ಷಾ ಕಾರ್ಯಕ್ರಮ ಇಂದು

# ಪಂಚಗೃಹ ಹಿರೇಮಠದಲ್ಲಿ ಪಂಚ ಶಿವಲಿಂಗಗಳ ಪ್ರತಿಷ್ಠಾಪನೆ

■ ವಿಜಯಸಾಕ್ಷಿ ಸುದ್ದಿ, ನರಗುಂದ

ವೀರಶೈವ ಧರ್ಮದ ಪಂಚಪೀಠಗಳಲ್ಲಿ ಒಂದಾಗಿರುವ ಉಜ್ಜಯಿನಿ ಸದ್ಧರ್ಮ ಜಗದ್ಗುರು ಪೀಠದ ಶಾಖಾಮಠವಾಗಿರುವ ನರಗುಂದ ಪಟ್ಟಣದ ಬಜಾರ್ ರಸ್ತೆಯಲ್ಲಿರುವ ಪಂಚಗೃಹ ಗುಡ್ಡದ ಹಿರೇಮಠದ ಮಹಾತಪಸ್ವಿ ಲಿಂಗೈಕ್ಯ ಶ್ರೀಮದ್ ಘನಲಿಂಗ ಚರಚಕ್ರವರ್ತಿ ಚರಮೂರ್ತಿ ಚನ್ನವೀರ ದೇವರು, ಗುರು ಚನ್ನವೀರದೇವರು ಹಾಗೂ ಅವರ ಗುರುವರ್ಯರುಗಳ ಕರ್ತೃ ಗದ್ದುಗೆಗಳ ಮೇಲೆ ಪಂಚ ಶಿವಲಿಂಗಗಳ ಹಾಗೂ ಮುಂಭಾಗದಲ್ಲಿ ನಂದಿ ವಿಗ್ರಹದ ಪ್ರತಿಷ್ಠಾಪನಾ ಸಮಾರಂಭ ನ.16ರಂದು ಜರುಗಲಿದೆ.

ಬೆಳಗಾವಿ ಜಿಲ್ಲೆ ರಾಮದುರ್ಗ ತಾಲೂಕು ಬನ್ನೂರು ಚಿಕ್ಕಮಠದ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ, ಸವದತ್ತಿ ತಾಲೂಕು ಹೂಲಿ ಸಾಂಬಯ್ಯನವರ ಮಠದ ಉಮೇಶ್ವರ ಶಿವಾಚಾರ್ಯ ಸ್ವಾಮೀಜಿ, ಬಾಗಲಕೋಟ ಜಿಲ್ಲೆ ಬದಾಮಿ ತಾಲೂಕು ನರಸಾಪೂರ ಹಿರೇಮಠದ ಮರುಳಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಹಾಗೂ ಗದಗ ಜಿಲ್ಲೆ ರೋಣದ ಗುಲಗಂಜಿಮಠದ ಗುರುಪಾದ ಸ್ವಾಮೀಜಿ ಪಾಲ್ಗೊಂಡು ಪಂಚ ಶಿವಲಿಂಗಗಳ ಪ್ರತಿಷ್ಠಾಪನಾ ಕೈಂಕರ್ಯ ನೆರವೇರಿಸುವರು.

ನರಗುಂದ ಶಾಸಕ ಹಾಗೂ ಮಾಜಿ ಸಚಿವ ಸಿ.ಸಿ. ಪಾಟೀಲ, ವಿಧಾನಸಭೆಯ ಮಾಜಿ ಉಪಾಧ್ಯಕ್ಷ ಬಿ.ಆರ್. ಯಾವಗಲ್ಲ ಹಾಗೂ ಬಾಗಲಕೋಟೆಯ ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಅವರು ಧರ್ಮ ಸಮಾರಂಭದಲ್ಲಿ ಪಾಲ್ಗೊಳ್ಳುವರು.

ಧಾರ್ಮಿಕ ಕಾರ್ಯಕ್ರಮಗಳು: ನ. 16ರಂದು ಪ್ರಾತಃಕಾಲದಲ್ಲಿ ಎಲ್ಲ ಶಿವಾಚಾರ್ಯ ಸ್ವಾಮೀಜಿಯವರ ಸಾನ್ನಿಧ್ಯದಲ್ಲಿ ಹಾಗೂ ವಿವಿಧ ವೈದಿಕ ವೃಂದದವರಿಂದ ಮಹಾಸಂಕಲ್ಪ ಪೂಜೆ, ಶ್ರೀಮಹಾಗಣಪತಿ ಪೂಜೆ, ಶ್ರೀಗಂಗಾಕಲಶ ಪೂಜೆ, ಪುಣ್ಯಾಹವಾಚನ, ನಾಂದಿ ಸಮಾರಾಧನೆ, ಉಮಾಮಹೇಶ್ವರ ಪೂಜೆ, ಪಂಚಕಲಶ ಪೂಜೆ, ಪಂಚಾಮೃತ ಸಹಿತ ಏಕಾದಶ ಮಹಾರುದ್ರಾಭಿಷೇಕ, ರುದ್ರಹೋಮ, ಪ್ರಾಣಪ್ರತಿಷ್ಠಾಪನೆ, ಶಿವಾಷ್ಟೋತ್ತರ, ನೂರೊಂದು ಬಿಲ್ವಾರ್ಚನೆ, ಪುಷ್ಪಾಲಂಕಾರ ಮಹಾಪೂಜೆ, ಮಹಾಮಂಗಲದ ಎಲ್ಲ ಧಾರ್ಮಿಕ ವಿಧಿ–ವಿಧಾನಗಳು ನಡೆಯಲಿವೆ. ಇದೇ ಸಂದರ್ಭದಲ್ಲಿ ಸುಮಾರು 40ಕ್ಕೂ ಅಧಿಕ ವೀರಮಾಹೇಶ್ವರ ಜಂಗಮ ವಟುಗಳಿಗೆ ಅಯ್ಯಾಚಾರ ಶಿವದೀಕ್ಷಾ ಕಾರ್ಯಕ್ರಮವೂ ನಡೆಯಲಿದೆ. ದಾಸೋಹ ಸೇವೆಯಲ್ಲಿ ಅನ್ನಸಂತರ್ಪಣೆ ಜರುಗುವುದು.

ನರಗುಂದ ಪಂಚಗೃಹ ಗುಡ್ಡದ ಹಿರೇಮಠದ ಹಿರಿಯರಾಗಿದ್ದ ಲಿಂಗೈಕ್ಯ ಎನ್.ಜಿ. ಹಿರೇಮಠ ಗುರುಗಳ ಸಂಕಲ್ಪ ಮತ್ತು ಸದಾಶಯದಂತೆ ಈ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದ್ದು, ನರಗುಂದ ಹಾಗೂ ಸುತ್ತಲಿನ ಎಲ್ಲ ಗ್ರಾಮಗಳ ಭಕ್ತಗಣ ಮತ್ತು ಮಹಾಜನತೆ ಪಾಲ್ಗೊಂಡು ಗುರುಕಾರುಣ್ಯಕ್ಕೆ ಪಾತ್ರರಾಗಬೇಕೆಂದು ಧರ್ಮ ಸಮಾರಂಭದ ಸಂಚಾಲಕರಾದ ನಿವೃತ್ತ ಎಸಿಪಿ ಜಿ.ಆರ್. ಹಿರೇಮಠ, ನಿವೃತ್ತ ಮುಖ್ಯ ಗ್ರಂಥಾಲಯಾಧಿಕಾರಿ ಬಿ.ಆರ್. ಹಿರೇಮಠ ಹಾಗೂ ನಿವೃತ್ತ ವಿಶೇಷ ಜಿಲ್ಲಾಧಿಕಾರಿ ಎಂ.ಆರ್. ಹಿರೇಮಠ ಅವರು ಜಂಟಿ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





ಇದೇ ಸಂದರ್ಭದಲ್ಲಿ ತೈಲವರ್ಣದ ಭುವನೇಶ್ವರಿ ಚಿತ್ರ ರಚಿಸಿದ ಖ್ಯಾತ ಚಿತ್ರಕಲಾವಿದ ಸಿ.ಎನ್. ಪಾಟೀಲ ಅವರ ಮಗಳಾದ ಲಲಿತಾ ಪಾಟೀಲರನ್ನು ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಕರ್ನಾಟಕ ಸುವರ್ಣ ಸಂಭ್ರಮವನ್ನು ಗದುಗಿನಲ್ಲಿ ಆಚರಿಸಿದ ಸಂದರ್ಭದಲ್ಲಿ ತಮ್ಮ ತಂದೆಯವರು ರಚಿಸಿದ ಭುವನೇಶ್ವರಿ ಚಿತ್ರವನ್ನು ಎಲ್ಲ ಆಯಾಮಗಳಲ್ಲಿ ಬಳಸಿಕೊಂಡಿದ್ದು ಸಂತಸದ ಸಂಗತಿಯಾಗಿದೆ. ಆದರೆ ಅವರ ಮನೆತನದವರನ್ನು ಮರೆತಿರುವದು ಮನಸ್ಸಿಗೆ ನೋವನ್ನು ಉಂಟುಮಾಡಿದೆ. ಪರಿಷತ್ತು ಗುರುತಿಸಿ ಗೌರವಿಸಿರುವದು ಸಂತಸ ತಂದಿದೆ ಎಂದರು.



■ ವಿಜಯಸಾಕ್ಷಿ ಸುದ್ದಿ, ಗದಗ

ಮಧ್ಯಪ್ರದೇಶದಲ್ಲಿ 3ನೇ ವಿಧಾನಸಭೆ ಕ್ಷೇತ್ರದಲ್ಲಿ ಗದಗನ ಬಿಜೆಪಿ ಹಿರಿಯ ಮುಖಂಡರಾದ ಜಗನ್ನಾಥಸಾ ಭಾಂಡಗೆ ನೇತೃತ್ವದಲ್ಲಿ 3ನೇ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗೊಲ್ಲು ಶುಕ್ಲಾ ಅವರ ಪರವಾಗಿ ಮನೆ ಮನೆಗೆ ತೆರಳಿ ಮತಯಾಚನೆ ಮಾಡಿ ಪ್ರಚಾರ ಮಾಡಿದರು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಅಪ್ಪಣ್ಣ ತೆಂಗಿನಕಾಯಿ, ಎಸ್.ಬಿ. ಚವಡಿ, ಬಸವರಾಜ ಅಡ್ನೂರ ಹಾಗೂ ಮಧ್ಯಪ್ರದೇಶದ ಬಿಜೆಪಿ ಹಿರಿಯ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸಹಕಾರ ಸಂಸ್ಥೆಗಳು ದೇಶದ ಆರ್ಥಿಕ ಸುಸ್ಥಿರತೆಗೆ ಬೆನ್ನೆಲುಬು

▶▶ ಮೊದಲನೇ ಪುಟದಿಂದ

ಭಾರತ ಸಹಕಾರ ಸಪ್ತಾಹ ಹಾಗೂ 'ಸಾಲ ಮತ್ತು ಸಾಲೇತರ ಸಹಕಾರ ಸಂಘಗಳ ಪುನಶ್ಚೇತನ ಹಾಗೂ ಆರ್ಥಿಕ ಸೇರ್ಪಡೆ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿ, ಕರ್ನಾಟಕ ರಾಜ್ಯ ಸಹಕಾರ ಹಾಲು ಉತ್ಪಾದಕರ ಮಹಾಮಂಡಳದ ನಿರ್ದೇಶಕ ಎಚ್.ಜಿ. ಹಿರೇಗೌಡ್ರ ಮಾತನಾಡಿ, ಸಹಕಾರಿ ರಂಗ ನಿರೀಕ್ಷಿತ ಮಟ್ಟದಲ್ಲಿ ಪ್ರಗತಿ ಹೊಂದಿಲ್ಲ. ಅನೇಕ ಸಮಸ್ಯೆಗಳು ಹಲವು ವರ್ಷಗಳಿಂದ ಹಾಗೆಯೇ ಉಳಿದಿವೆ. ನೈಪುಣ್ಯತೆ, ರಾಜಕೀಯ, ಹಸ್ತಕ್ಷೇಪದಿಂದಾಗಿ ಸುಧಾರಣೆ ಕಾಣುತ್ತಿಲ್ಲ ಎಂದರು.

ಧಾರವಾಡ ಹಾಲು ಒಕ್ಕೂಟದ ವಿಶ್ರಾಂತ ಜಂಟಿ ನಿರ್ದೇಶಕ ಡಾ.ಎಂ.ಬಿ. ಮಡಿವಾಳರ, ಲೆಕ್ಕಪರಿಶೋಧನಾ ಇಲಾಖೆಯ ಉಪನಿರ್ದೇಶಕಿ ವಿದ್ಯಾ ಹೊನ್ನಶೆಟ್ಟಿ ಮಾತನಾಡಿದರು. ವ್ಯಕ್ತಿತ್ವ ವಿಕಸನ ತರಬೇತುದಾರ ಸಿದ್ದು ಯಾಪಲಪರವಿ ಉಪನ್ಯಾಸ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಹಿರಿಯ ಸಹಕಾರಿ ಹಾಗೂ ಎಸ್.ಎಸ್. ಗ್ರೂಪ್ಸ್ ಅಧ್ಯಕ್ಷ ಜಿ.ಎಂ. ಪಲ್ಲೇದ ಮಾತನಾಡಿ, ಸಹಕಾರ ಸಂಘ–ಸಂಸ್ಥೆಗಳು, ಸಹಕಾರಿ ಬ್ಯಾಂಕುಗಳು ಯಶಸ್ವಿಯಾಗಿ ಕಾರ್ಯನಿರ್ವಹಿಸಲು ಸರ್ವರ ಸಹಕಾರ ಅವಶ್ಯ ಎಂದರು.

ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘದ ಅಧ್ಯಕ್ಷ ವ್ಹಿ.ಎಸ್. ಶಿವಕಾಳಿಮಠ, ಉಪಾಧ್ಯಕ್ಷ ಮಹೇಶ ಗಾಣಗೇರ, ನಿರ್ದೇಶಕರಾದ ಎಂ.ಬಿ. ಲಿಂಗದಾಳ, ಗದಗ ಜಿಲ್ಲೆಯ ಸಹಕಾರ ಸಂಘಗಳ ಉಪನಿಬಂಧಕರಾದ ಎಸ್.ಎಸ್. ಕಬಾಡೆ, ಸಹಾಯಕ ನಿರ್ದೇಶಕ ಎಂ.ವ್ಹಿ. ಚುರ್ಚಿಹಾಳ, ಸಹಕಾರ ಅಭಿವೃದ್ಧಿ ಅಧಿಕಾರಿ ಎಚ್.ಎಂ. ಶಾಂತಾ, ವಸಂತ ಚಿಕ್ಕನಗೌಡ್ರ, ಎಸ್.ವ್ಹಿ. ಚಳಗೇರಿ, ಕಿರಣಕುಮಾರ ಹುಗ್ಗಿ ಉಪಸ್ಥಿತರಿದ್ದರು.

ಕಿರಣ ಹಿರೇಮಠ ಪ್ರಾರ್ಥಿಸಿದರು. ತಿಮ್ಮಾರೆಡ್ಡಿ ಸಂಶಿ ಸ್ವಾಗತಿಸಿದರು. ಯೂನಿಯನ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಕರಿಯಪ್ಪನವರ ನಿರೂಪಿಸಿದರು. ಶಿವಸಂಗಮ ಸಂಘದ ವ್ಯವಸ್ಥಾಪಕ ಬಸವರಾಜ ಹಳ್ಳಿಕೇರಿ ವಂದಿಸಿದರು. ಕಾರ್ಯಕ್ರಮಕ್ಕೂ ಮುನ್ನ ನಡೆದ ಬೈಕ್ ರ್ಯಾಲಿಗೆ ಹಿರಿಯ ಸಹಕಾರಿ ಜಿ.ಎಂ ಪಲ್ಲೇದ ಚಾಲನೆ ನೀಡಿದರು.

# ಮೂಲ ಸೌಕರ್ಯ ಒದಗಿಸದಿದ್ದರೆ ಹೈಕೋರ್ಟ್‌ಗೆ ವರದಿ

▶▶ ಮೊದಲನೇ ಪುಟದಿಂದ

ಇನ್ನು ಕೆಲವು ದಿನಗಳಲ್ಲಿ ಈ ಶಾಲೆಗೆ ಅಗತ್ಯವಿರುವ ಮೂಲ ಸೌಕರ್ಯ ಕಲ್ಪಿಸದಿದ್ದರೆ ನಿಮ್ಮ ಬೇಜವಾಬ್ದಾರಿತನದ ಕುರಿತು ಹೈಕೋರ್ಟ್‌ಗೆ ವರದಿ ಸಲ್ಲಿಸುವೆ ಎಂದು ಎಚ್ಚರಿಸಿದರು. ಕಾಮಗಾರಿಗೆ ಸಂಬಂಧಿಸಿದ ಕೆಲವು ದಾಖಲೆಗಳನ್ನು ಸ್ಥಳದಲ್ಲಿ ಪರಿಶೀಲಿಸಿದರು.

ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎಂ. ಮುಂದಿನಮನಿ, ಶಾಲೆಯ ಸಹ ಶಿಕ್ಷಕ ಮಹ್ಮದ ದಾದನ್ನವರ, ಗ್ರಾ.ಪಂ ಪಿಡಿಓ ಮತ್ತು ಗ್ರಾಮ ಪಂಚಾಯತ್ ಸದಸ್ಯರು, ರೈತ ಸಂಘದ ಗ್ರಾಮ ಘಟಕಾಧ್ಯಕ್ಷ ಲೋಕೇಶ ಜಾಲವಡಗಿ, ತಿರಕಪ್ಪ ಶಿಗ್ಲಿ, ನಿಂಗಪ್ಪ ಗುಡ್ಡಣ್ಣವರ ಇದ್ದರು.

# ವಿಧಿ–ವಿಧಾನಗಳೊಂದಿಗೆ ಗೋಪೂಜೆ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಗೋವುಗಳನ್ನು ರಕ್ಷಣೆ ಮಾಡಿದ ಗೋವರ್ಧನನ್ನು ಗೌರವಿಸುವ ಗೋ ಪೂಜೆಯನ್ನು ಲಕ್ಕುಂಡಿ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಗ್ರಾಮದಲ್ಲಿ ನೆರವೇರಿಸಲಾಯಿತು.

ಗ್ರಾಮ ದೇವತೆ, ಆಂಜನೇಯ, ಬ್ರಹ್ಮ ದೇವರ ದೇವಸ್ಥಾನ ಸೇರಿದಂತೆ ಮನೆ ಮನೆಗಳ ಮುಂದೆ ವಿಧಿ–ವಿಧಾನಗಳೊಂದಿಗೆ ಪೂಜೆ ನೆರವೇರಿತು.

ಮಾಜಿ ಯೋಧರಾದ ದತ್ತಾತ್ರೇಯ ಜೋಶಿ ಅವರು ತಮ್ಮ ಮನೆಯ ಮುಂದೆ ಗೋವಿಗೆ ಪೂಜೆ ಸಲ್ಲಿಸಿ, ಆಹಾರವನ್ನು ನೀಡಿದರು. ನಂತರ ತಮ್ಮ ಜಮೀನಿನಲ್ಲಿ ಬೆಳೆದ ಭತ್ತದ ಫಸಲಿಗೆ ಕುಟುಂಬ ಸಮೇತರಾಗಿ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೀಪಾವಳಿ ಹಬ್ಬವು ಹಿಂದೂಗಳಿಗೆ ವಿಶೇಷವಾಗಿದೆ. ಈಗ ಮುಜಾರಾಯಿ ಇಲಾಖೆಯ ಆದೇಶದಂತೆ ಇಂದು ಗೋಧೂಳಿ ಸಮಯದಲ್ಲಿ ದೇವಸ್ಥಾನ ಹಾಗೂ ಮನೆಗಳಲ್ಲಿ ಗೋ ಪೂಜೆ ನೆರವೇರಿಸಲಾಗುತ್ತಿದೆ ಎಂದು ವಿವರಿಸಿದರು.

## ಪ್ರವಚನ, ಶಿವಾನುಭವ ಕಾರ್ಯಕ್ರಮದಲ್ಲಿ ಪೂಜ್ಯಶ್ರೀ ಶಿವಶಾಂತವೀರ ಶರಣರು

# ಸಂತರು ಶರಣ ಧರ್ಮಕ್ಕೆ ಬೆಳಕಾದವರು



■ ವಿಜಯಸಾಕ್ಷಿ ಸುದ್ದಿ, ಗದಗ

ಶರಣರು, ಸಂತರು ಸಂಪತ್ತಿನ ಸೇವಕರಾಗಬಾರದು, ಸಮಾಜದ ಸೇವಕರಾಗಬೇಕೆಂದು ಬಳಗಾನೂರ–ಜಂತ್ಲಿ–ಶಿರೂರ ಶ್ರೀಮಠದ ಪೂಜ್ಯಶ್ರೀ ಶಿವಶಾಂತವೀರ ಶರಣರು ಹೇಳಿದರು.

ಅವರು ಮುಂಡರಗಿ ತಾಲೂಕಿನ ಜಂತ್ಲಿ ಶಿರೂರು ಗ್ರಾಮದ ಚಿಕ್ಕೇನಕೊಪ್ಪದ ಚನ್ನವೀರ ಶರಣರ ಶ್ರೀಮಠದಲ್ಲಿ ಕಾರ್ತಿಕ ಮಾಸದ ಅಂಗವಾಗಿ ಕಲಬುರಗಿ ಶರಣಬಸವೇಶ್ವರರ 29ನೇ ವರ್ಷದ ಪ್ರವಚನ ಕಾರ್ಯಕ್ರಮ ಹಾಗೂ ಅಕ್ಕನ ಬಳಗದ 318ನೇ ಶಿವಾನುಭವದ ಸಮ್ಮುಖ ವಹಿಸಿ ಮಾತನಾಡಿದರು.

ಸಂತರು, ಶರಣರು ಹಸುವಿನಂತೆ ಇರಬೇಕು, ಆನೆಯಂತೆ ಇರಬಾರದು. ಹಸು ಪರೋಪಕಾರಿ ಜೀವಿ, ಹಾಗೆಯೇ ಕಲಬುರಗಿ ಶರಣರು, ಚಿಕೇನಕೊಪ್ಪದ ಚನ್ನವೀರ ಶರಣರು ಸೇರಿದಂತೆ ನಾಡಿನ ಶರಣರು ಹಸುವಿನಂತೆ ಜೀವಿಸಿ ಶರಣ ಧರ್ಮಕ್ಕೆ ಬೆಳಕಾದವರು ಎಂದರು.

ಸಾನ್ನಿಧ್ಯ ವಹಿಸಿದ್ದ ಹಿರೇವಡ್ಡಟ್ಟಿಯ ಪೂಜ್ಯಶ್ರೀ ವೀರೇಶ್ವರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಸ್ವರ್ಗವು ತಾನಾಗಿಯೇ ಎಲ್ಲರಿಗೂ ಸಿಗುವದಿಲ್ಲ. ಸ್ವರ್ಗ ಬೇಕೆಂದರೆ ಅದರ ಮಾರ್ಗವನ್ನು ತಿಳಿಯಬೇಕು. ಬುದ್ಧಿ ತಂಪಾಗಿರಬೇಕು, ಕಾಯಕದಲ್ಲಿ ನಿಷ್ಠೆ ಹೊಂದಿರಬೇಕು. ನಾಲಿಗೆ ಮೃದುವಾಗಿರಬೇಕು. ಮನಸ್ಸಿನಲ್ಲಿ ಕೃತಜ್ಞತಾಭಾವ ಹೊಂದುವದರೊಂದಿಗೆ ಶರಣರ ಜೀವನದರ್ಶನದ ಪ್ರವಚನ ಕೇಳಿದಾಗ ಸ್ವರ್ಗವು ತಾನಾಗಿಯೇ ದೊರಕುವುದು ಎಂದು ಹೇಳಿದರು.

ಶರಣಶ್ರೀ ಶಿವಲಿಂಗಯ್ಯಶಾಸ್ತ್ರಿಜೀ ಸಿದ್ದಾಪೂರ ಅವರು ತಮ್ಮ ಪ್ರವಚನದಲ್ಲಿ ಮಾತನಾಡಿ, ನಮ್ಮ ಜೀವನ ಇರುವುದು ಬರಿ ನಾಲ್ಕು ದಿನ ಮಾತ್ರ. ಅದರಲ್ಲಿ ಒಂದು ದಿನ ಅಪೇಕ್ಷೆಗಾಗಿ, ಎರಡನೆ ದಿನ ನಿರೀಕ್ಷೆಗಾಗಿ, ಮೂರನೇ ದಿನ ಬದುಕಿಗಾಗಿ ಹಾಗೂ ನಾಲ್ಕನೇ ದಿನ ಸಾವಿಗಾಗಿ. ಈ ನಾಲ್ಕು ದಿನಗಳ ಮಧ್ಯ ಮನುಷ್ಯ ತನ್ನ ಬದುಕು ಬೆಳಕಾಗಿಸಲು ಶರಣರ ಜೀವನ ದರ್ಶನ ಪ್ರವಚನ ಕೇಳಿ ಅವರಂತೆ ನಡೆದಾಗ ಜೀವನ ಸಾರ್ಥಕವೆನಿಸುತ್ತದೆ ಎಂದು ಹೇಳಿದರು.

ದಾನಿಗಳಾದ ಬೇವಿನಹಳ್ಳಿಯ ಬಸನಗೌಡ ಪಾಟೀಲ ವೇದಿಕೆ ಮೇಲೆ ಉಪಸ್ಥಿತರಿದ್ದರು. ಬಿಳೆಬಾಳದ ಶಿವಲಿಂಗಯ್ಯ ಗವಾಯಿಗಳು ಪ್ರಾರ್ಥಿಸಿದರು. ಸಿದ್ದೇಶಕುಮಾರ ಹಿರೇಸಿಂದೋಗಿ ತಬಲಾ ಸಾಥ್ ನೀಡಿದರು. ಶಂಕರಗೌಡ ಪಾಟೀಲ ಸಭಾ ನಿರೂಪಣೆ ಮಾಡಿದರು. ಜಂತ್ಲಿ–ಶಿರೂರ ಗ್ರಾಮದ ಗುರು–ಹಿರಿಯರು, ಮಹಿಳೆಯರು ಮುಂತಾದವರು ಉಪಸ್ಥಿತರಿದ್ದರು.

# ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರದ ಮಹತ್ವದ ಹೆಜ್ಜೆ

▶▶ ಮೊದಲನೇ ಪುಟದಿಂದ

ನೂರಾರು ವರ್ಷಗಳ ಹಿಂದೆ ನಿರ್ಮಿಸಿರುವ ಈ ಸುರಂಗ ಕಾಲುವೆಗಳನ್ನು ಅಭಿವೃದ್ಧಿ ಪಡಿಸಿ ಸಂರಕ್ಷಿಸುವ ರೂಪುರೇಷೆಗಳನ್ನು ಸಿದ್ಧಪಡಿಸಲಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಬಸವ ಕಲ್ಯಾಣದಲ್ಲಿ ನಿರ್ಮಾಣ ಹಂತದಲ್ಲಿರುವ ಅನುಭವ ಮಂಟಪಕ್ಕೆ ಭೇಟಿ ನೀಡಲಾಯಿತು. ಬಸವಕಲ್ಯಾಣ ಕೋಟೆಗೆ ಬೇಟಿ ನೀಡಿ 'ಲೇಸರ್ ಶೋ ವೀಕ್ಷಿಸಿ ತಂಡ ನಿರೂಪಣೆ ಬಗ್ಗೆ ಹರ್ಷ ವ್ಯಕ್ತಪಡಿಸಿತು. ಬಸವ ಕಲ್ಯಾಣದ ಕೋಟೆ ದತ್ತು ಪತ್ರ ಅವರಿಗೆ ನೀಡಲಾಯಿತು. ಈ ಸಂದರ್ಭದಲ್ಲಿ ಬೀದರ್ ಜಿಲ್ಲೆಯ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಮತ್ತು ಸಚಿವರಾದ ರಹೀಮ್ ಖಾನ್ ಹಾಗೂ ಶಾಸಕರು, ಜನಪ್ರತಿನಿಧಿಗಳು ಹಾಜರಿದ್ದರು.

**ಕಲಬುರಗಿಯ ನಾಗಾವಿ–ಶ್ರೀ ಯಲ್ಲಮ್ಮದೇವಿ ದೇವಾಸ್ಥಾನದ ಐತಿಹಾಸಿಕ ತಾಣ**

ಕಲಬುರಗಿ ಜಿಲ್ಲೆಯ ಇತಿಹಾಸ ಪ್ರಸಿದ್ಧ ಶ್ರದ್ಧಾ ಕೇಂದ್ರ ನಾಗಾವಿ ಶ್ರೀ ಯಲ್ಲಮ್ಮ ದೇವಿ ದೇವಾಸ್ಥಾನದ ಐತಿಹಾಸಿಕ ತಾಣಕ್ಕೆ ಭೇಟಿ ನೀಡಲಾಯಿತು ಎಂದು ಹೇಳಿದ ಸಚಿವ ಎಚ್.ಕೆ. ಪಾಟೀಲ್, ರಾಷ್ಟಕೂಟರ ಆಳ್ವಿಕೆಯ ಕಾಲದಲ್ಲಿ ನಾಗಾವಿ ವಿಶ್ವವಿದ್ಯಾಲಯದ ಕೇಂದ್ರವಾಗಿತ್ತು ಎಂಬುದು ಪುರಾತತ್ವ ವಸ್ತು ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆಯ ಸಂಶೋಧನೆಯಿಂದ ಬೆಳಕಿಗೆ ಬಂದಿದೆ. ಇಲ್ಲಿರುವ 60 ಕಂಬಗಳ ಮಂಟಪವನ್ನು ಅಂದಿನ "ಘಟಿಕಾಸ್ಥಾನ" ಎಂದು ಶಾಸದಲ್ಲಿ ಹೆಸರಿಸಲಾಗಿದ್ದು, ವಿಶ್ವವಿದ್ಯಾಲಯ ಅಸ್ತಿತ್ವದ ಮೊದಲ ಕನ್ನಡ ವಿಶ್ವವಿದ್ಯಾಲಯ ದೇಶದ ಮೊದಲ ವಿಶ್ವವಿದ್ಯಾಲಯ ಎಂದು ಇತಿಹಾಸಕಾರರು ಹೆಮ್ಮೆಯಿಂದ ಹೇಳುತ್ತಿದ್ದಾರೆ ಎಂದರು.

ಹೈದ್ರಾಬಾದ್ ಮ್ಯೂಜಿಯಂ ವಸ್ತು ಸಂಗ್ರಹಾಲಯದಲ್ಲಿ ದೊರಕಿರುವ ಸಾಹಿತ್ಯ ನಾಗಾವಿ ವಿಶ್ವವಿದ್ಯಾಲಯದ ಕುರಿತು ವಿವರ ಬಹಿರಂಗಪಡಿಸುತ್ತದೆ. 1928ರಲ್ಲಿ ಹೈದ್ರಾಬಾದ್‌ನ ನಿಜಾಮ್ ಸರ್ಕಾರ ಸಂಶೋಧನೆ ಪ್ರಾರಂಭಿಸಿ, ನಾಗಾವಿ ವಿಶ್ವವಿದ್ಯಾಲಯದ ಕುರುಹುಗಳ ಕುರಿತು ಪುಸ್ತಕ ಪ್ರಕಟಿಸಿದೆ. ಪತ್ರಿಕೆಯವರು ಪ್ರಕಟಿಸಿರುವ ಹಲವಾರು ಮಾಹಿತಿಗಳು ಸಚಿವರ ತಂಡದ ಪ್ರವಾಸದ ಸಂದರ್ಭದಲ್ಲಿ ಲಭ್ಯಗೊಂಡವು ಎಂದು ಸಚಿವ ಎಚ್.ಕೆ. ಪಾಟೀಲ್ ವಿವರ ನೀಡಿದರು.

ಮುಖ್ಯವಾಗಿ ಶಹಪುರದ 'ದಿಡ್ಡಿ ಬಾಗಿಲು' ವೀಕ್ಷಿಸಲಾಯಿತು. ದುರಸ್ತಿಗಾಗಿ ಸೂಕ್ತ ನೆರವು ನೀಡುವ ಭರವಸೆಯನ್ನು ನೀಡಲಾಯಿತು. ಸಚಿವರ ತಂಡದಲ್ಲಿದ್ದ ತಜ್ಞರು, ಇತಿಹಾಸಕಾರರು ಮತ್ತು ಆಸಕ್ತರ ತಂಡ ಬೇರೆ ಬೇರೆ ಸ್ಥಳಗಳಿಗೆ ಭೇಟಿಕೊಟ್ಟು ರಕ್ಷಣೆ ಇಲ್ಲದೇ ಅನೇಕ ಶಾಸನಗಳು ನೆಲಕಚ್ಚಿರುವುದು ಕಂಡು ಬಂದವು. ಯಾದಗಿರಿಯ ಭಾಗಶಃ ಕೋಟೆಯನ್ನು ವೀಕ್ಷಿಸಲಾಯಿತು. ಈ ಎಲ್ಲಾ ಸ್ಮಾರಕಗಳ ಅಭಿವೃದ್ಧಿಗೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಪ್ರವಾಸೋದ್ಯಮ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



■ ವಿಜಯಸಾಕ್ಷಿ ಸುದ್ದಿ, ಗದಗ

ಮಧ್ಯಪ್ರದೇಶದಲ್ಲಿ 3ನೇ ವಿಧಾನಸಭೆ ಕ್ಷೇತ್ರದಲ್ಲಿ ಗದಗನ ಬಿಜೆಪಿ ಹಿರಿಯ ಮುಖಂಡರಾದ ಜಗನ್ನಾಥಸಾ ಭಾಂಡಗೆ ನೇತೃತ್ವದಲ್ಲಿ 3ನೇ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗೊಲ್ಲು ಶುಕ್ಲಾ ಅವರ ಪರವಾಗಿ ಮನೆ ಮನೆಗೆ ತೆರಳಿ ಮತಯಾಚನೆ ಮಾಡಿ ಪ್ರಚಾರ ಮಾಡಿದರು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಅಪ್ಪಣ್ಣ ತೆಂಗಿನಕಾಯಿ, ಎಸ್.ಬಿ. ಚವಡಿ, ಬಸವರಾಜ ಅಡ್ನೂರ ಹಾಗೂ ಮಧ್ಯಪ್ರದೇಶದ ಬಿಜೆಪಿ ಹಿರಿಯ ಕಾರ್ಯಕರ್ತರು ಉಪಸ್ಥಿತರಿದ್ದರು.

# ಚನ್ನಬಸವಣ್ಣನವರ ಜಯಂತಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕುಮಾರವ್ಯಾಸ ವಾಣಿಜ್ಯ ಮಳಿಗೆಯಲ್ಲಿರುವ ನಂದಿನಿ ಹಾಲಿನ ಕೇಂದ್ರದಲ್ಲಿ ದೀಪಾವಳಿಯ ಬಲಿಪಾಡ್ಯಮಿಯ ದಿನದಂದು ಜ್ಞಾನನಿಧಿ, ಚನ್ನಬಸವಣ್ಣನವರ ಜಯಂತಿ ಹಾಗೂ ದೀಪಾವಳಿ ಹಬ್ಬವನ್ನು ಜ್ಞಾನದ ಬೆಳಕಿನ ಹಬ್ಬವನ್ನಾಗಿ ಆಚರಿಸಲಾಯಿತು.

ಇದೇ ಸಂದರ್ಭದಲ್ಲಿ ಸಾಮೂಹಿಕವಾಗಿ ಇಷ್ಟಲಿಂಗ ಪ್ರಾರ್ಥನೆ ನೆರವೇರಿಸಲಾಯಿತು. ವೇದಿಕೆ ಮೇಲೆ ಮುರಘರಾಜೇಂದ್ರ ಬಡ್ನಿ, ರಮೇಶ ವರ್ಣೇಕರ ಪುಷ್ಪಾ ಜನಾದ್ರಿ, ಅರವಿಂದ ಶ್ರೀನಿವಾಸ ಅಯ್ಯಂಗಾರ, ರಾಜು ಬಳಗೇರಿ, ಬಸವರಾಜ ಗ. ಖಂಡಮ್ಮನವರ ಉಪಸ್ಥಿತರಿದ್ದರು.

ಕಾರ್ಯಕ್ರಮ ಉದ್ದೇಶಿಸಿ ಬಸವಕೇಂದ್ರದ ಕಾರ್ಯಾಧ್ಯಕ್ಷ, ಕನ್ನಡಾಭಿಮಾನಿ ಮಲ್ಲಿಕಾರ್ಜುನ ಖಂಡಮ್ಮನವರ ಚನ್ನಬಸವಣ್ಣನವರ ಹುಟ್ಟು, ಸಾಧನೆ, ಸಿದ್ಧಾಂತಗಳ ಬಗ್ಗೆ ಮಾತನಾಡಿ, ಇಂದಿನ ಯುವಕರು ಧರ್ಮಸೇವೆ, ಸಮಾಜದ ಏಳ್ಗೆಗಾಗಿ ಮಕ್ಕಳಿಗೆ ಒಳ್ಳೆಯ ಸಂಸ್ಕಾರ ನೀಡಬೇಕು. ಮಹಾತ್ಮರ ವಚನಗಳ ಅಧ್ಯಯನ ಮಾಡಬೇಕು ಎಂದು ವಿನಂತಿಸಿದರು. ವಚನ ಮಂಗಲಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು.

# ಆ್ಯಂಗ್ಲೋ ಉರ್ದು ಬಾಲಕಿಯರ ಪ್ರೌಢಶಾಲೆಯಲ್ಲಿ ಮಕ್ಕಳ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆ್ಯಂಗ್ಲೋ ಉರ್ದು ಬಾಲಕಿಯರ ಪ್ರೌಢಶಾಲೆಯಲ್ಲಿ ಮಕ್ಕಳ ದಿನಾಚರಣೆಯನ್ನು ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಜನಾಬ ಎಲ್.ಆರ್. ಇಟಗಿಯವರು ಮಾತನಾಡುತ್ತ, ಪಂ. ಜವಾಹರಲಾಲ್ ನೆಹರೂರವರು ಭಾರತದ ಪ್ರಥಮ ಪ್ರಧಾನಮಂತ್ರಿಯಾಗಿ ಭಾರತದ ಅಭಿವೃದ್ಧಿಗೆ ಬುನಾದಿಯನ್ನು ಹಾಕಿಕೊಟ್ಟಿದ್ದಾರೆ. ಇವರ ಮುತ್ಸದ್ದಿತನ, ದೂರದೃಷ್ಟಿಗಳನ್ನು ಎಂದೂ ಮರೆಯಲು ಸಾಧ್ಯವಿಲ್ಲ. ಮಕ್ಕಳ ಬಗೆಗಿನ ಅಕ್ಕರೆಯಿಂದ ತಮ್ಮ ಜನ್ಮದಿನವನ್ನು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲು ಹೇಳಿದ್ದಾರೆ. ಇವರ ಆದರ್ಶಗಳನ್ನು ಎಲ್ಲರೂ ಪಾಲಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಶಿಕ್ಷಕ ವೃಂದದ ಎಮ್.ಎ. ಕಮಾನಗಾರ, ಟಿ.ಐ. ಕಾಲೇಖಾನ, ಎಮ್.ಝಡ್. ಭಾವಿಕಟ್ಟಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ವಿದ್ಯಾರ್ಥಿನಿ ಆಯಿಶಾಸಿದ್ದಿಕಾ ನವಲಗುಂದ ನಿರೂಪಿಸಿದರು. ಶಿಕ್ಷಕರಾದ ಝಡ್.ಎ. ಮುಲ್ಲಾ ಸ್ವಾಗತಿಸಿದರು. ಎಮ್.ಎಚ್. ಜಮಾಲಸಾಬನವರ ವಂದಿಸಿದರು.

# ಹಾವಳಿ ಆಂಜನೇಯ ದೇವಸ್ಥಾನದ ರಥೋತ್ಸವ ಸಂಪನ್ನ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೀಪಾವಳಿ ಪಾಡ್ಯದ ದಿನ ಸಂಜೆ ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನದ ರಥೋತ್ಸವವನ್ನು ಸಂಪ್ರದಾಯದಂತೆ ಶ್ರದ್ಧಾ-ಭಕ್ತಿಯಿಂದ ಸಾವಿರಾರು ಭಕ್ತರ ಸಮ್ಮುಖದಲ್ಲಿ ನೆರವೇರಿಸಲಾಯಿತು.

ಸಂಜೆ ಹೂವಿನಶಿಗ್ಲಿ ವಿರಕ್ತಮಠದ ಚನ್ನವೀರ ಮಹಾಸ್ವಾಮಿಗಳು ರಥೋತ್ಸವಕ್ಕೆ ಚಾಲನೆ ನೀಡಿದರು. ವಿವಿಧ ವಾದ್ಯಮೇಳ, ಭಜನೆಯೊಂದಿಗೆ ಜರುಗಿದ ರಥೋತ್ಸವದಲ್ಲಿ ಭಕ್ತರು ಪಾಲ್ಗೊಂಡು ಘೋಷಣೆ ಮೊಳಗಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಗಳು, ಜಾತ್ರಾ ಮಹೋತ್ಸವಗಳು ಜನ ಸಮುದಾಯದಲ್ಲಿ ಶಾಂತಿ, ನೆಮ್ಮದಿ, ಸಾಮರಸ್ಯ ಸಂವರ್ಧನೆಗೊಳ್ಳಲು ಸಹಕಾರಿಯಾಗಿವೆ. ಅಜ್ಞಾನ, ಅಂಧಕಾರ ಕಳೆದು ಜ್ಞಾನದ ಜ್ಯೋತಿ ಬೆಳಗಿಸುವುದು ದೀಪಾವಳಿ ಹಬ್ಬದ ವೈಶಿಷ್ಟವಾಗಿದೆ. ದೀಪವು ಧರ್ಮ, ಸಂಸ್ಕೃತಿ, ಜ್ಞಾನ ಮತ್ತು ಆಧ್ಯಾತ್ಮದ ಸಂಕೇತವಾಗಿ, ದೀಪ ಬೆಳಗಿದಂತೆ ಎಲ್ಲರ ಜೀವನದಲ್ಲಿ ಬೆಳಕು ಪ್ರಜ್ವಲಿಸಬೇಕು, ಸಮಾಜದಲ್ಲಿ ಮತ್ತೊಬ್ಬರ ಬಾಳಿಗೆ ಬೆಳಕಾಗುವ ಕೆಲಸ ಮಾಡಬೇಕೆ ಹೊರತು ಕತ್ತಲೆಗೆ ತಳ್ಳುವ ಕಾರ್ಯವನ್ನು ಮಾಡಬಾರದು ಎಂದರು.

ಈ ಸಂದರ್ಭದಲ್ಲಿ ಶಾಸಕ ಡಾ.ಚಂದ್ರು ಲಮಾಣಿ ರಥಕ್ಕೆ ಪೂಜೆ ಸಲ್ಲಿಸಿದರು. ಈಶ್ವರಪ್ಪ ಕುಂಬಾರ, ನೀಲಪ್ಪ ಕರ್ಜೆಕಣ್ಣವರ, ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ, ಮಾಂತೇಶ ಅಣ್ಣಿಗೇರಿ, ಹಿಂದೂ ಮಹಾಸಭಾ ಗಣಪತಿ ಅಧ್ಯಕ್ಷ ಫಕ್ಕೀರೇಶ ಅಣ್ಣಿಗೇರಿ, ವಿಶ್ವ ಹಿಂದೂ ಪರಿಷತ್ ಬಜರಂಗದಳ ತಾಲೂಕಾ ಸಂಯೋಜಕ ಮಾಂತೇಶ ಗೋಡಿ, ನವೀನ ಕುಂಬಾರ, ಚಂದ್ರು ಮಾಗಡಿ, ಶಂಕರ ಕುಂಬಾರ, ಮಂಜುನಾಥ ಕುಂಬಾರ, ಮಹಾಂತೇಶ ಕುಂಬಾರ, ಮಂಜುನಾಥ ಕೊಡಳ್ಳಿ, ಜಗದೀಶ ಕುಂಬಾರ, ಆನಂದ ಗೋಡಿ, ಸಂತೋಷ ಗೋಡಿ, ಸಂತೋಷ ಪೂಜಾರ, ಬಸವರಾಜ ಗೋಡಿ, ಶಂಕರ ಗೋಡಿ, ಮಹೇಶ ಹೊಗೆಸೊಪ್ಪಿನ, ವಿಜಯಕುಮಾರ ಹತ್ತಿಕಾಳ, ಸುನೀಲ ಮಹಾಂತಶೆಟ್ಟರ, ನಿಂಗಪ್ಪ ಬನ್ನಿ, ಶಕ್ತಿ ಕತ್ತಿ, ಅರ್ಚಕ ಮುರಘೇಂದ್ರಸ್ವಾಮಿ ಹಿರೇಮಠ ಸೇರಿ ಹಿರಿಯರು, ಮುಖಂಡರು, ಯುವಕರು ಪಾಲ್ಗೊಂಡಿದ್ದರು.

# ಬಿ.ಕಾಂ 6ನೇ ಸೆಮಿಸ್ಟರ್ ಪರೀಕ್ಷೆ ಫಲಿತಾಂಶ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಮನೋರಮಾ ಮಹಾವಿದ್ಯಾಲಯದ ಶೈಕ್ಷಣಿಕ ಸಾಲಿನ ಬಿ.ಕಾಂ ಕೋರ್ಸಿನ 6ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ಸಾಧನೆಗೈದ ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ಸಿಮ್ರನ ಮುಲ್ಲಾ 629 ಅಂಕ ಪಡೆದು ಪ್ರಥಮ ಸ್ಥಾನ, ಆಲಿಯಾ ಜೈದಿ 628 ಅಂಕ ಪಡೆದು ದ್ವಿತೀಯ ಸ್ಥಾನ, ರೀತು ಸವಣೂರ 604 ಅಂಕ ಪಡೆದು ತೃತೀಯ ಸ್ಥಾನ, ಸಿಂಧು ಭಜಂತ್ರಿ 602 ಅಂಕ ಪಡೆದು 4ನೇ ಸ್ಥಾನ, ನಾಗಗಂಗಾ ಕಲಬುರ್ಗಿ 598 ಅಂಕ ಪಡೆದು 5ನೇ ಸ್ಥಾನ ಪಡೆದಿದ್ದಾರೆ.

ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಹಾಗೂ ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ, ಸಹ ಸಂಯೋಜಕರಾದ ಪ್ರೊ. ನಿವೇದಿತಾ ಪೊಲೀಸ್‌ಪಾಟೀಲ ಹಾಗೂ ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.

# ಶಾಂತದುರ್ಗಾ ದೇವಸ್ಥಾನದ ಉದ್ಘಾಟನೆ ನ.21ಕ್ಕೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಡಾ. ಅಂಬೇಡ್ಕರ ನಗರದಲ್ಲಿ ನೂತನವಾಗಿ ನಿರ್ಮಿಸಿರುವ ಶಾಂತದುರ್ಗಾ ದೇವಸ್ಥಾನದ ಉದ್ಘಾಟನೆ, ಮೂರ್ತಿ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಕಾರ್ಯಕ್ರಮಗಳು ನವಂಬರ್ 21ರಂದು ಜರುಗಲಿವೆ ಎಂದು ದೇವಸ್ಥಾನದ ಪ್ರಕಟಣೆ ತಿಳಿಸಿದೆ.

ಈ ಸಮಾರಂಭದ ಧಾರ್ಮಿಕ ಕಾರ್ಯಗಳು ನ.17ರಿಂದ ಪ್ರಾರಂಭವಾಗಲಿದ್ದು, ದಿ. 17ರ ಮಧ್ಯಾಹ್ನ 1 ಗಂಟೆಗೆ ಶಾಂತದುರ್ಗಾ ಮೂರ್ತಿಯ ಮೆರವಣಿಗೆಯು ಪಟ್ಟಣದ ಪ್ರಮುಖ ಬೀದಿಗಳಲ್ಲಿ ನಡೆಯಲಿದೆ. ದಿ. 18ರಂದು ಬೆಳಿಗ್ಗೆ 10.30ಕ್ಕೆ ವಾಸ್ತು ಶಾಂತಿ, 19ರಂದು ಬೆಳಿಗ್ಗೆ 6ಕ್ಕೆ ಜಲಾಧಿವಾಸ, 20ರಂದು ಬೆಳಿಗ್ಗೆ 10.30ಕ್ಕೆ ಧಾನ್ಯಾದಿವಾಸ ಮತ್ತು ಉತ್ಸವ ಮೂರ್ತಿಯ ಮೆರವಣಿಗೆ ನಡೆಯಲಿದೆ.

21ರಂದು ಬೆಳಿಗ್ಗೆ ಬ್ರಾಹ್ಮೀ ಮುಹೂರ್ತದಲ್ಲಿ ಶಾಂತದುರ್ಗಾ ದೇವಿಯ ಮೂರ್ತಿ ಪ್ರತಿಷ್ಠಾಪನೆ, ದೇವಸ್ಥಾನದ ಉದ್ಘಾಟನೆ ಮತ್ತು ಕಳಸಾರೋಹಣ ಕಾರ್ಯಗಳು ನಡೆಯಲಿವೆ.

ರೋಣ ಶಾಸಕ ಜಿ.ಎಸ್. ಪಾಟೀಲ ದೇವಸ್ಥಾನವನ್ನು ಉದ್ಘಾಟಿಸಲಿದ್ದು, ನರೇಗಲ್ಲ ಹಿರೇಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಕಳಾಸಾ ರೋಹಣವನ್ನು ನೆರವೇರಿಸಲಿದ್ದಾರೆ.

ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಹಾಲಕೆರೆಯ ಜ. ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ವಹಿಸಲಿದ್ದು, ನೇತೃತ್ವವನ್ನು ನಿಡಗುಂದಿಕೊಪ್ಪದ ಶಾಖಾ ಶಿವಯೋಗಮಂದಿರದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮೀಜಿ, ಸಿದ್ಧನಕೊಳ್ಳದ ಧರ್ಮಾಧಿಕಾರಿ ಡಾ. ಶಿವಕುಮಾರ ಕಂಬಾಳಿಮಠ ಮತ್ತು ನರೇಗಲ್ಲದ ದರಗಾದ ಹಜರತ್ ಮಂಜೂರ ಹುಸೇನ್ ಶ್ಯಾವಲಿಯವರು ವಹಿಸಲಿದ್ದಾರೆ.

ಅಧ್ಯಕ್ಷತೆಯನ್ನು ಚಿತ್ರದುರ್ಗದ ಛಲವಾದಿ ಗುರುಪೀಠದ ಬಸವನಾಗಿದೇವ ಸ್ವಾಮೀಜಿ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಕಳಕಪ್ಪ ಬಂಡಿ, ಸಮಾಜ ಸೇವಕ ಅಂದಪ್ಪ ಸಂಕನೂರ, ಮುಂಡರಗಿಯ ಹೇಮಗಿರೀಶ ಹಾವನಾಳ, ಪಿಎಸ್‌ಐ ನಿಖಿಲ್ ಕಾಂಬಳೆ ಮತ್ತು ಪ.ಪಂ ಮುಖ್ಯಾಧಿಕಾರಿ ರಮೇಶ ಹೊಸಮನಿ ಮತ್ತಿತರ ಗಣ್ಯರು, ಪ.ಪಂ ಸದಸ್ಯರು ಆಗಮಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

**ಕರ್ನಾಟಕ-50ರ ಸಂಭ್ರಮ | ವಿದ್ಯಾರ್ಥಿಗಳಿಗಾಗಿ ಗಾಳಿಪಟ ತಯಾರಿಸುವ, ಹಾರಿಸುವ ಸ್ಪರ್ಧೆ**

# ಗಾಳಿಪಟ ಹಾರಿಸಿ ಸಂಭ್ರಮಿಸಿದ ಮಕ್ಕಳು





■ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಿ 50 ವರ್ಷಗಳು ಪೂರ್ಣಗೊಂಡ ಹಿನ್ನೆಲೆಯಲ್ಲಿ ರಾಜ್ಯದಾದ್ಯಂತ ರಾಜ್ಯೋತ್ಸವ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಸಂಭ್ರಮದಿಂದ ಆಚರಿಸುವ ಹಿನ್ನೆಲೆಯಲ್ಲಿ ಮೆಣಸಗಿ ಹಾಗೂ ಹೊಳೆಮಣ್ಣೂರು ಗ್ರಾಮ ಪಂಚಾಯಿತಿಯಿಂದ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಮಕ್ಕಳಿಗೆ ಗಾಳಿಪಟ ತಯಾರಿಸುವ ಹಾಗೂ ಹಾರಿಸುವ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಆಲೂರು ವೆಂಕಟರಾಯರ ಜನ್ಮ ಸ್ಥಳದ ನೆರೆಯ ಹೊಳೆ ಮಣ್ಣೂರು ಹಾಗೂ ಮೆಣಸಗಿ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರ ಉತ್ಸಾಹ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಇಚ್ಛಾಶಕ್ತಿಯಿಂದಾಗಿ ಇಲ್ಲಿಯ 500ಕ್ಕೂ ಹೆಚ್ಚು ಮಕ್ಕಳು ಸ್ವತಃ ಗಾಳಿಪಟ ತಯಾರಿಸಿ, ಹಾರಿಸಿ ಸಂಭ್ರಮಿಸುತ್ತಿದ್ದಾರೆ.

> ಗ್ರಾಮೀಣ ಕ್ರೀಡೆಗಳು ಮಹತ್ವ ಕಳೆದುಕೊಳ್ಳುತ್ತಿರುವ ಈ ದಿನಗಳಲ್ಲಿ, ನಮ್ಮ ಗ್ರಾಮ ಪಂಚಾಯಿತಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಮಕ್ಕಳಿಗೆ ಗಾಳಿಪಟ ತಯಾರಿಸುವ ತರಬೇತಿ ನೀಡಿ, ಅಗತ್ಯ ಪರಿಕರಗಳನ್ನು ಒದಗಿಸುವ ಮೂಲಕ ಮಕ್ಕಳು ವಿನೂತನವಾಗಿ ಯೋಚಿಸುವಂತೆ ಹಾಗೂ ಸಂಭ್ರಮಿಸುವಂತೆ ಮಾಡಿರುವುದು ನಮಗೆ ಹೆಮ್ಮೆಯ ವಿಷಯ.
>
> – ಸುಜಾತಾ ಮಠಪತಿ.
> ಅಧ್ಯಕ್ಷರು, ಗ್ರಾ.ಪಂ–ಹೊಳೆ ಮಣ್ಣೂರು.

> ಕರ್ನಾಟಕ 50ರ ಸಂಭ್ರಮದ ನಿಮಿತ್ತ ನಮ್ಮ ಶಾಲೆಯ ಮಕ್ಕಳು ಗಾಳಿಪಟ ತಯಾರಿಸಿ, ಹಾರಿಸಿ ಸಂಭ್ರಮಿಸುತ್ತಿರುವುದು ನಮಗೂ ಖುಷಿ ತಂದಿದ್ದು, ಎಲ್ಲ ಹಿರಿಯರೂ ತಮ್ಮ ಬಾಲ್ಯದ ದಿನಗಳೆಡೆ ಹೊರಳುವಂತೆ ಮಾಡಿದೆ.
>
> – ಈಶ್ವರಪ್ಪ ಮುದೇನೂರು.
> ಅಧ್ಯಕ್ಷರು, ಗ್ರಾ.ಪಂ–ಮೆಣಸಗಿ.

ಈ ಎರಡೂ ಗ್ರಾಮ ಪಂಚಾಯಿತಿಗಳಿಂದ ಗ್ರಂಥಾಲಯ ಮೇಲ್ವಿಚಾರಕರು, ಗ್ರಾಮೀಣ ಪುನರ್ ವಸತಿ ಕಾರ್ಯಕರ್ತರು, ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಮಕ್ಕಳಿಗೆ ಗಾಳಿಪಟ ತಯಾರಿಸುವ ಕುರಿತು ತರಬೇತಿ ನೀಡಿ, ಕೆಂಪು ಹಾಗೂ ಹಳದಿ ಬಣ್ಣದ ಹಾಳೆಗಳನ್ನು ಪೂರೈಸಿದ್ದಾರೆ.

ಮಕ್ಕಳು ಸ್ಥಳೀಯವಾಗಿ ದೊರೆಯಬಹುದಾದ ಬಿದಿರು ಹಾಗೂ ತೆಂಗಿನ ಕಡ್ಡಿಗಳಿಂದ ಗಾಳಿಪಟಗಳನ್ನು ತಯಾರಿಸಿ, ಸೂತ್ರ ಜೋಡಿಸಿ ಬಾಲಂಗೋಚಿ ಕಟ್ಟಿ, ಒಬ್ಬರಿಗಿಂತ ಒಬ್ಬರು ಅಂದವಾದ ಗಾಳಿಪಟಗಳನ್ನು ಪ್ರತಿದಿನ ಶಾಲೆಗೆ ತಂದು ಪ್ರದರ್ಶಿಸುವುದೇ ಸಂಭ್ರಮವಾಗಿದೆ.

ಗಾಳಿಪಟ ತಯಾರಿಸಿ ಹಾರಿಸುವುದನ್ನು ಕಂಡು ಮನೆಯಲ್ಲಿರುವ ಪಾಲಕರು–ಪೋಷಕರು ತಮ್ಮ ಬಾಲ್ಯವನ್ನು ನೆನಪಿಸಿಕೊಂಡು ಮಕ್ಕಳಿಗೂ ಇಂತಹ ಅವಕಾಶ ಒದಗಿಸಿರುವ ಗ್ರಾಮ ಪಂಚಾಯಿತಿಯ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಅಲ್ಲದೆ, ತಾವು ಕೂಡ ಮಕ್ಕಳಿಗೆ ಗಾಳಿಪಟ ತಯಾರಿಸುವಲ್ಲಿ ನೆರವಾಗಿದ್ದಾರೆ.

ಎಲ್ಲಾ ಶಾಲೆಗಳ ಮುಖ್ಯೋಪಾಧ್ಯಾಯರು ಉತ್ತಮವಾಗಿ ಗಾಳಿಪಟ ತಯಾರಿಸಿ ಹಾರಿಸಿದ ವಿದ್ಯಾರ್ಥಿಗಳ ಪೈಕಿ ತರಗತಿವಾರು ಪ್ರಥಮ, ದ್ವಿತೀಯ, ತೃತೀಯ ಹಾಗೂ ಸಮಾಧಾನಕರ ಬಹುಮಾನಕ್ಕಾಗಿ ವಿದ್ಯಾರ್ಥಿಗಳ ಹೆಸರನ್ನು ಅಂತಿಮಗೊಳಿಸಿದ್ದು, ಬಹುಮಾನ ಪಡೆಯಲಿರುವ ಮಕ್ಕಳ ಸಂಖ್ಯೆಯೇ 100 ದಾಟಿದೆ!

# ಕರಿಯಪ್ಪ ಅಂಕಲಿಗೆ ಪಿಎಚ್‌ಡಿ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನರಗುಂದ ತಾಲೂಕಿನ ಹದ್ಲಿ ಗ್ರಾಮದ ಕರಿಯಪ್ಪ ಎನ್ ಅಂಕಲಿ ಅವರಿಗೆ ಮೈಸೂರು ವಿಶ್ವವಿದ್ಯಾಲಯವು ಪಿಎಚ್‌ಡಿ (ಡಾಕ್ಟರ್ ಆಫ್ ಫಿಲಾಸಫಿ) ಪದವಿ ಪ್ರದಾನ ಮಾಡಿ ಗೌರವಿಸಿದೆ.

ಡಾ. ನಾಗರಾಜ ನಾಯಕ ಅವರ ಮಾರ್ಗದರ್ಶನದಲ್ಲಿ ಸಾದಪರಪಡಿಸಿದ ಡಿಸೈನ್, ಸಿಂಥೆಸಿಸ್, ಕ್ಯಾರೆಕ್ಟರೇಸೇಷನ್ ಮತ್ತು ಬಯೋಲೋಜಿಕಲ್ ಎವ್ಯಾಲುವೇಷನ್ ಆಫ್ 1,2,3 ಟ್ರಯೋಜೋಲ್ ಫರ್ಮಾಕೋಪೋರ್ ಲಿಂಕಡ್ ಹೆಟರೋಸೈಕ್ಲಿಕ್ ಡೆರಿವೇಟಿವಸ್ ಎಂಬ ಮಹಾಪ್ರಬಂಧವನ್ನು ರಸಾಯನ ಶಾಸ್ತ್ರ ವಿಷಯದಲ್ಲಿ ಮಂಡಿಸಿದ್ದಕ್ಕಾಗಿ ಈ ಗೌರವ ಲಭಿಸಿದೆ.

# ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ನಿಂಗಪ್ಪ ಗುಡ್ಡದ ತಂಡ ಪ್ರಥಮ



■ವಿಜಯಸಾಕ್ಷಿ ಸುದ್ದಿ, ಗದಗ

ಡಂಬಳ ಹೋಬಳಿಯ ಡೋಣಿ ಗ್ರಾಮದ ಶ್ರೀಬೀರಲಿಂಗೇಶ್ವರ ಜನಪದ ಕಲಾ ತಂಡದವರು ರೋಣ ತಾಲೂಕಿನ ಯಾವಗಲ್ಲ ಗ್ರಾಮದ ಶ್ರೀ ಭರಮಲಿಂಗೇಶ್ವರ, ಬೀರಲಿಂಗೇಶ್ವರ, ಮಾಳಿಂಗರಾಯನ ದೇವಸ್ಥಾನಗಳ ದೀಪಾವಳಿ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡ ರಾಜ್ಯ ಮಟ್ಟದ ಹೊನಲು ಬೆಳಕಿನ ಡೊಳ್ಳಿನ ಪದಗಳ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ಸಾಧನೆಗೈದಿದ್ದಾರೆ.

ಖ್ಯಾತ ಜಾನಪದ ಕಲಾವಿದ ನಿಂಗಪ್ಪ ಎಚ್.ಗುಡ್ಡದ, ಹಾಲಪ್ಪ ಕುರಿ, ಶರಣಪ್ಪ ಕವಲೂರ, ಬಸವರಾಜ ಅಳವಂಡಿ, ಪಕ್ಕೀರಪ್ಪ ವಡ್ಡರ, ಕಾಶಿಂಸಾಬ ಶಿರಹಟ್ಟಿ, ಈರಪ್ಪ ಅಕ್ಕಿ, ನಿಂಗಪ್ಪ ಹೈಗಾರ, ದಾವಲಸಾಬ ದೊಡ್ಡಮನಿ ಇವರಿಗೆ ಸುತ್ತಮುತ್ತಲಿನ ಗ್ರಾಮದ ಹಿರಿಯರು, ಡೋಣಿ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.

**ಬರ, ಹಿಂಗಾರು ಹಂಗಾಮಿನ ಪರಿಸ್ಥಿತಿ ಕುರಿತು ಪರಿಶೀಲನಾ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ**

# ಜನ-ಜಾನುವಾರುಗಳಿಗೆ ಸಮರ್ಪಕ ನೀರು ಪೂರೈಕೆಗೆ ಕ್ರಮ ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ



ಜಿಲ್ಲೆಯಲ್ಲಿ ಸದ್ಯ ಕುಡಿಯುವ ನೀರಿನ ಸಮಸ್ಯೆ ಎದುರಾಗಿಲ್ಲ. ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಬಹುದಾದ ಗ್ರಾಮಗಳಲ್ಲಿ ಟ್ಯಾಂಕರ್ ಹಾಗೂ ಇತರೇ ಕುಡಿಯುವ ನೀರಿನ ಮೂಲಗಳಿಂದ ಸಮರ್ಪಕ ನೀರು ಸರಬರಾಜಿಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಬರ ಹಾಗೂ ಹಿಂಗಾರು ಹಂಗಾಮಿನ ಪರಿಸ್ಥಿತಿಕುರಿತು ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ 32,218 ರೈತರು ಹೆಸರು ಬೆಳೆಗೆ ವಿಮೆ ಹಣ 2.95 ಕೋಟಿ ರೂ. ಪಾವತಿಸಿದ್ದಾರೆ. 148 ಕೋಟಿ ರೂ. ವಿಮೆ ಮೊತ್ತವಾಗಿದೆ. ಹೆಸರು ಬೆಳೆಗೆ ವಿಮಾ ಪರಿಹಾರ ಪ್ರತಿ ಹೆಕ್ಟೇರ್‌ಗೆ 8,250 ರೂ.ನಂತೆ ಜಿಲ್ಲೆಯ 31,218 ರೈತರಿಗೆ 34.99 ಕೋಟಿ ರೂ. ಪಾವತಿಸಬೇಕಾದ ಮೊತ್ತವಾಗಿತ್ತು. ಇದರಲ್ಲಿ 25.48 ಕೋಟಿ ವಿಮಾ ಪರಿಹಾರ ಮೊತ್ತವನ್ನು ಪಾವತಿಸಲಾಗಿದ್ದು, ಬಾಕಿಯಿದ್ದು ರೈತರ ಖಾತೆಗಳಿಗೆ ಜಮೆ ಆಗಲಿದೆ ಎಂದು ಕೃಷಿ ಅಧಿಕಾರಿಗಳು ಮಾಹಿತಿ ಒದಗಿಸಿದರು.

ಗೋವಿನಜೋಳ, ಶೇಂಗಾ, ಹತ್ತಿ, ಈರುಳ್ಳಿ, ಮೆಣಸಿನಕಾಯಿ ಈ ಬೆಳೆಗಳಿಗೆ ಪಾವತಿಸಿದ ವಿಮಾ ಕಂತಿಗೆ ಮಧ್ಯಂತರ ಪರಿಹಾರವಾಗಿ ಜಿಲ್ಲೆಗೆ 90 ಕೋಟಿ ಪರಿಹಾರ ಬರಬೇಕಿದೆ ಎಂದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಮಾತನಾಡಿ, ಮುಂಗಾರು ಹಂಗಾಮಿನಲ್ಲಿ 309810 ಹೆಕ್ಟೇರ್ ಪ್ರದೇಶ ಕೃಷಿ ಬೆಳೆಗಳ ಬಿತ್ತನೆ ಗುರಿ ಹೊಂದಿದ್ದು, ಆ ಪೈಕಿ 201275 ಹೆ. ಬಿತ್ತನೆಯಾಗಿದೆ. 78996 ಹೆಕ್ಟೇರ್ ಪ್ರದೇಶದ ತೋಟಗಾರಿಕೆ ಬೆಳೆ ಬಿತ್ತನೆಗೆ ಗುರಿ ಹೊಂದಿದ್ದು, ಆ ಪೈಕಿ 72569 ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕೆ ಬೆಳೆ ಬಿತ್ತನೆಯಾಗಿದೆ.

> ಜನಸಾಮಾನ್ಯರಿಗೆ ಶುದ್ಧ ಕುಡಿಯುವ ನೀರು ಲಭ್ಯವಾಗಬೇಕು. ಜಾನುವಾರುಗಳಿಗೆ ನೀರು ಹಾಗೂ ಅಗತ್ಯ ಮೇವು ಸಕಾಲಕ್ಕೆ ದೊರೆಯುವಂತೆ ಮುಂಜಾಗ್ರತಾ ಕ್ರಮಗಳನ್ನು ಸಂಬಂಧಿತ ಇಲಾಖೆ ಅಧಿಕಾರಿಗಳು ವಹಿಸಬೇಕು. ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಸಮಸ್ಯೆ ನಿಭಾಯಿಸುವಲ್ಲಿ ಅಧಿಕಾರಿಗಳ ನಿಧಾನಗತಿ ಸಹಿಸಲಾಗದು. ಪ್ರಸಕ್ತ ಸಾಲಿನಲ್ಲಿ ಮುಂಗಾರು ಹಂಗಾಮಿನಲ್ಲಿ ಮಳೆ ಕೊರತೆಯಿಂದ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳ ಹಾನಿಯಾಗಿದ್ದು, ರೈತರಿಗೆ ಬೆಳೆ ಪರಿಹಾರ ತ್ವರಿತಗತಿಯಲ್ಲಿ ತಲುಪಿಸಲು ಕ್ರಮ ವಹಿಸಬೇಕು.
>
> – ಎಚ್.ಕೆ. ಪಾಟೀಲ. ಜಿಲ್ಲಾ ಉಸ್ತುವಾರಿ ಸಚಿವರು.

ಮುಂಗಾರು ಹಂಗಾಮಿನಲ್ಲಿ ಬರಗಾಲದಿಂದ 187850 ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಬೆಳೆಗಳ ಹಾನಿಯಾಗಿದ್ದು, 66007 ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಎನ್‌ಡಿಆರ್‌ಎಫ್ ಮಾರ್ಗಸೂಚಿಯನ್ವಯ ಕೃಷಿ ಬೆಳೆಯ ಹಾನಿ ಪ್ರಮಾಣ 19745 ಲಕ್ಷ ರೂ ಹಾಗೂ ತೋಟಗಾರಿಕೆ ಬೆಳೆ ಹಾನಿ ಪ್ರಮಾಣ 6114.66 ಲಕ್ಷ ರೂ. ಆಗಿದೆ ಎಂದು ಅಂದಾಜಿಸಲಾಗಿದೆ. ಪರಿಹಾರ ಧನವನ್ನು ಸರ್ಕಾರ ಹೊರಡಿಸುವ ಮಾರ್ಗಸೂಚಿಗಳನ್ವಯ ವಿತರಣೆಗೆ ಕ್ರಮ ವಹಿಸಲಾಗುವುದು ಎಂದರು.

ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತನಾಡಿ, ಗ್ರಾಮೀಣ ಪ್ರದೇಶಗಳ ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ಮಾಹಿತಿ ಒದಗಿಸಿ, ಜಿಲ್ಲೆಯ 42 ಗ್ರಾಮಗಳಲ್ಲಿ ಮುಂದಿನ ದಿನಮಾನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಬಹುದಾದ ಗ್ರಾಮಗಳೆಂದು ಗುರುತಿಸಲಾಗಿದೆ.

ಈ ಗ್ರಾಮಗಳಿಗೆ ಪ್ರಸ್ತುತ ಡಿಬಿಓಟಿ ಯೋಜನೆಯಿಂದ ಕುಡಿಯುವ ನೀರು ಒದಗಿಸಲಾಗುತ್ತಿದ್ದು, ಇಲ್ಲಿಯವರೆಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗಿಲ್ಲ. ಸಮಸ್ಯೆ ಎದುರಾದಲ್ಲಿ ಹೊಸ ಬೋರ್‌ವೆಲ್ ಹಾಗೂ ಖಾಸಗಿ ಕೊಳವೆ ಬಾವಿಗಳಿಂದ ನೀರು ಪೂರೈಸಲು ಕ್ರಮ ವಹಿಸಲಾಗುವುದು ಎಂದರು.

ನಗರದ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಬಹುದಾದ ವಾರ್ಡುಗಳನ್ನು ಗುರುತಿಸಲಾಗಿದ್ದು, 9 ಸ್ಥಳೀಯ ಸಂಸ್ಥೆಗಳಲ್ಲಿ 50 ವಾರ್ಡುಗಳನ್ನು ಗುರುತಿಸಲಾಗಿದೆ. ಜಾನುವಾರುಗಳಿಗೆ ಅಗತ್ಯವಿರುವ ಮೇವು ಪೂರೈಸಲು ಸಚಿವರ ಸೂಚನೆಯಂತೆ ಪ್ರತಿ ಗ್ರಾಮ ಪಂಚಾಯತ್‌ವಾರು ಮೇವು ಬ್ಯಾಂಕ್ ತೆರೆಯಲು ಕ್ರಮ ವಹಿಸಲಾಗುತ್ತಿದೆ ಎಂದು ಸಭೆಗೆ ಮಾಹಿತಿ ಒದಗಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಡಾ. ವೆಂಕಟೇಶ ನಾಯ್ಕ, ಆಹಾರ ಇಲಾಖೆಯ ಉಪನಿರ್ದೇಶಕ ಗಂಗಪ್ಪ, ಪಿಆರ್‌ಇಡಿ ಕಾರ್ಯಪಾಲಕ ಅಭಿಯಂತರ ಶಿವಾನಂದ ಗೌಡರ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ, ಪಶುಸಂಗೋಪನೆ ಇಲಾಖೆ ಉಪನಿರ್ದೇಶಕ ಡಾ.ಹುಲಗಣ್ಣವರ ಸೇರಿದಂತೆ ತಾ.ಪಂ. ಆಡಳಿತಾಧಿಕಾರಿಗಳು, ಕಾರ್ಯನಿರ್ವಾಹಕ ಅಧಿಕಾರಿಗಳು, ಆಯಾ ತಾಲೂಕುಗಳ ತಹಸೀಲ್ದಾರರು ಸಭೆಯಲ್ಲಿ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka